# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಶಾಂತಿ ನೆಮ್ಮದಿ ಇಲ್ಲವೆಂದು ಕೊರಗಬೇಡ
ಆತ್ಮತೃಪ್ತಿಯ ಕೆಲಸ ಮಾಡಿ ಪಡೆದುಕೋ ಅದನ್ನು..
ರೂಪ ಸೌಂದರ್ಯಕೆ ಮರುಳಾಗಿ ಚಿಂತಿಸಬೇಡ
ನಿನ್ನ ಅಂತರಾಳದಲ್ಲಿ ರೂಪಿಸಿಕೋ ಅದನ್ನು..
ಪರರ ಆಸ್ತಿ ಸಂಪತ್ತು ನೋಡಿ ಸಸಗಲ್ಲಬೆನ್ನುಬೇಡ
ನ್ಯಾಯಮಾರ್ಗದಲ್ಲಿ ನಡೆದು ಸಂಪಾದಿಸಿಕೋ ಅದನ್ನು..
ನೀನೇ ತಪ್ಪು ಮಾಡಿ ಪರರಿಗೆ ಕೈ ತೋರಿಸಬೇಡ
ಬಯು ತಿನ್ನುವ ಮುನ್ನ ಪರಿಪಡಿಸಿಕೋ ಅದನ್ನು..
ಅಧಿಕಾರಕ್ಕಾಗಿ ಎಂದಿಗೂ ಹಾತೊರೆಯಲೇಬೇಡ
ಕಾಲಬಲ ಬರುವ ಹಾಗೆ ಸೃಷ್ಟಿಸಿಕೋ ಅದನ್ನು..

**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 27-06-2025 to 03-07-2025 ಬೆಲೆ: 7-00 ಸಂಪುಟ–5 ಸಂಚಿಕೆ–1 ಪುಟಗಳು–6













ಭಾರತ ತುರ್ತು ಪರಿಸ್ಥಿತಿಯನ್ನು ಅನುಭವಿಸಿ 50 ವರ್ಷ ಸಂದಿದೆ. ಆಂತರಿಕ ಗಲಭೆಯಿಂದಾಗಿ ಸಂವಿಧಾನದ 352ನೇ ವಿಧಿಯ ಅಡಿಯಲ್ಲಿ ರಾಷ್ಟ್ರಪತಿ ಫಕ್ರುದ್ದೀನ್ ಅಲಿ ಅಹ್ಮದ್ ಅವರು ಅಧಿಕೃತವಾಗಿ ಹೊರಡಿಸಿದ ತುರ್ತು ಪರಿಸ್ಥಿತಿಯು ಜೂನ್ 25, 1975 ರಿಂದ ಮಾರ್ಚ್ 21, 1977 ವರೆಗೆ 21 ತಿಂಗಳು ಜಾರಿಯಲ್ಲಿತ್ತು. ತುರ್ತು ಪರಿಸ್ಥಿತಿಗೂ ಮುನ್ನ, ಇಂದಿರಾ ಗಾಂಧಿ ಸರ್ಕಾರವು ತುರ್ತು ಪರಿಸ್ಥಿತಿಯ ಮೊದಲು ಮತ್ತು ಆ ಸಮಯದಲ್ಲಿ ರಾಜಕೀಯ ವಿರೋಧಿಗಳನ್ನು ಬಂಧಿಸಲು ಬಳಸಬಹುದಾದ ಕಠಿಣ ಕಾನೂನುಗಳನ್ನು ಜಾರಿಗೆ ತಂದಿತ್ತು. ಈ ಸಮಯದಲ್ಲಿ 100,000 ಕ್ಕೂ ಹೆಚ್ಚು ರಾಜಕೀಯ ವಿರೋಧಿಗಳು, ಪತ್ರಕರ್ತರು ಮತ್ತು ಭಿನ್ನಮತೀಯರನ್ನು ಇಂದಿರ ಗಾಂಧಿ ಆಡಳಿತವು ಜೈಲಿನಲ್ಲಿರಿಸಿತ್ತು.

## ಭ್ರಷ್ಟಾಚಾರಕ್ಕೆ ಕಾಂಗ್ರೆಸ್ ಶಾಸಕರಿಂದಲೇ ಸರ್ಟಿಫಿಕೇಟ್ –ಕಾಮತ್



**ಮಂಗಳೂರು:** ಇಷ್ಟು ದಿನ ಒಳಗೊಳಗೆ ನಡೆಯುತ್ತಿದ್ದ ರಾಜ್ಯ ಕಾಂಗ್ರೆಸ್ ಸರ್ಕಾರದ ಕಮಿಷನ್ ಅವ್ಯವಹಾರ ಇದೀಗ ಬಹಿರಂಗವಾಗಿಯೇ ನಡೆಯಲಾರಂಭಿಸಿದ್ದು ಸರ್ಕಾರದ ಹುಳುಕುಗಳೆಲ್ಲ ಬೀದಿಗೆ ಬಂದು ಜನಸಾಮಾನ್ಯರೂ ಸಹ ಹೇಸಿಗೆ ಪಟ್ಟುಕೊಳ್ಳುವಷ್ಟರ ಮಟ್ಟಿಗೆ ರಾಜ್ಯದ ಆಡಳಿತ ಹದಗೆಟ್ಟಿದೆ ಎಂದು ಶಾಸಕ ವೇದವ್ಯಾಸ ಕಾಮತ್‌ರವರು ಆರೋಪಿಸಿದರು. ರಾಜ್ಯದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದಿಂದ ಸ್ವತಃ ಕಾಂಗ್ರೆಸ್ಸಿನ ಹಿರಿಯ ನಾಯಕರುಗಳೇ ಬೇಸತ್ತಿದ್ದು ಇದೀಗ ನೇರವಾಗಿ ಸರ್ಕಾರದ ವಿರುದ್ಧ **3ನೇ ಪುಟಕ್ಕೆ**

## ನಿರ್ಭೀತ ವರದಿಗಾರಿಕೆಯಿಲ್ಲದ ಪತ್ರಿಕೋದ್ಯಮ ಅರ್ಥಹೀನ: ಸುಧೀರ್‌ಕುಮಾರ್ ರೆಡ್ಡಿ

**ಮಂಗಳೂರು:** ಪತ್ರಿಕೋದ್ಯಮದ ಹೃದಯ ಬಡಿತವೇ ನಿರ್ಭೀತ ವರದಿಗಾರಿಕೆ. ನಿರ್ಭೀತ ವರದಿಗಾರಿಕೆ ಇಲ್ಲದ ಪತ್ರಿಕೋದ್ಯಮ ಅರ್ಥಹೀನ ಎಂದು ಮಂಗಳೂರು ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ಹೇಳಿದಾರೆ. ನಗರದ ಪ್ರೆಸ್‌ಕ್ಲಬ್‌ನಲ್ಲಿ ದ.ಕ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಬುಧವಾರ ಪತ್ರಕರ್ತ ವಿಜಯ ಕೋಟ್ಯಾನ್‌ರಿಗೆ ಪ್ರಸಕ್ತ ಸಾಲಿನ ಬ್ರಾಂಡ್ ಮಂಗಳೂರು ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿ, ರಷ್ಯಾದ ಪತ್ರಕರ್ತೆಯಾಗಿದ್ದ ಅನ್ನಾ ಪೊಲಿಟ್ಕೋವಸ್ಕಾಯರ ನಿರ್ಭೀತ ವರದಿಗಾರಿಕೆಯನ್ನು ಉಲ್ಲೇಖಿಸಿ ಮಾತನಾಡಿದ ಸುಧೀರ್ ರೆಡ್ಡಿ, ಭಾರತದಲ್ಲಿಯೂ ಅಂತಹ ಪತ್ರಕರ್ತರಿದ್ದಾರೆ. ತಾವು ಮಾಡುವ ಕೆಲಸದಲ್ಲಿ ನೈಜ ಉದ್ದೇಶವಿದ್ದಾಗ **3ನೇ ಪುಟಕ್ಕೆ**




## ಜಮೀರ್ ಅಹಮದ್ ತಕ್ಷಣ ರಾಜೀನಾಮೆ ನೀಡಲಿ:ಬೇಳೂರು

**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಸ್ವಪಕ್ಷೀಯ ಶಾಸಕರ ಅಸಮಾಧಾನ ಮುಂದುವರಿದಿದ್ದು, ವಸತಿ ಸಚಿವ ಜಮೀರ್ ಅಹಮದ್ ಖಾನ್ ಅವರ ರಾಜೀನಾಮೆಗೆ ಸಾಗರ ಕ್ಷೇತ್ರದ ಕಾಂಗ್ರೆಸ್ ಶಾಸಕ, ರಾಜ್ಯ ಅರಣ್ಯ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು ಒತ್ತಾಯಿಸಿದ್ದಾರೆ ನಗರದಲ್ಲಿ ಸುದ್ದಿಗಾರರ ಜೊತೆ ಅವರು ಮಾತನಾಡಿ, ವಸತಿ ಸಚಿವರ ವಿರುದ್ಧ ಮನೆ ಹಂಚಿಕೆ ವಿಚಾರದಲ್ಲಿ ಹಣ ಕೇಳಿದ್ದಾರೆಂಬ ಆರೋಪ ಕೇಳಿ ಬಂದಿದೆ. ಹೀಗಾಗಿ, ವಸತಿ ಸಚಿವ ಜಮೀರ್ ಅಹಮದ್ ಖಾನ್ ಅವರು **3ನೇ ಪುಟಕ್ಕೆ**







# ಭ್ರಷ್ಟಾಚಾರಕ್ಕೆ ಕಾಂಗ್ರೆಸ್ ಶಾಸಕರಿಂದಲೇ ಸರ್ಟಿಫಿಕೇಟ್ – ಕಾಮತ್

**ಒಂದನೇ ಪುಟದಿಂದ......**

ವಾಗ್ದಾಳಿ ಆರಂಭಿಸಿದ್ದಾರೆ. ಬಡವರಿಗಾಗಿ ಇರುವ ಹೌಸಿಂಗ್ ಬೋರ್ಡ್ ಲಂಚಕೋರರ ಅಡ್ಡೆಯಾಗಿದ್ದು, ಕಮಿಷನ್‌ಕೊಟ್ಟವರಿಗೆ ಮಾತ್ರ ಮನೆ ನೀಡಲಾಗಿದೆ ಎಂದು ಬಿ.ಆರ್ ಪಾಟೀಲ್‌ರವರು ಆರೋಪಿಸಿದರೆ, ಕಂದಾಯ ಸಚಿವ ಕೃಷ್ಣ ಬೈರೇಗೌಡರು, "ಸರ್ಕಾರಿ ಕಚೇರಿಗಳಲ್ಲಿ ಯಾವ ಕೆಲಸಕ್ಕೆ ಎಷ್ಟು ಲಂಚ ಎಂಬುದನ್ನು ಬೋರ್ಡ್ ಹಾಕಿಕೊಂಡು ಬಿಡಿ" ಎಂದು ಹತಾಶೆ ವ್ಯಕ್ತಪಡಿಸಿದ್ದಾರೆ. ನಾನೊಬ್ಬ ಆಡಳಿತ ಪಕ್ಷದ ಶಾಸಕನಾಗಿದ್ದುಕೊಂಡು ಒಂದು ಚರಂಡಿ, ರಸ್ತೆ ನಿರ್ಮಿಸಲು ಸಹ ಸಾಧ್ಯವಾಗುತ್ತಿಲ್ಲ ಎಂದು ಎನ್. ವೈ. ಗೋಪಾಲಕೃಷ್ಣ ಆಕ್ರೋಶ ತೋರಿಸಿದರೆ, ರಾಜ್ಯದಲ್ಲಿ ಆಡಳಿತ ಸಂಪೂರ್ಣ ವಿಫಲವಾಗಿದ್ದು, ಎರಡು ವರ್ಷದಿಂದ ಯಾವುದೇ ಅನುದಾನ ಸಿಗುತ್ತಿಲ್ಲ. ರಾಜೀನಾಮೆ ಕೊಟ್ಟು ಹೋಗುವ ಪರಿಸ್ಥಿತಿ ಇದೆ ಎಂದು ರಾಜು ಕಾಗೆಯವರು ಅಳಲು ತೋಡಿಕೊಂಡಿದ್ದಾರೆ. ಸ್ವತಃ ಮುಖ್ಯಮಂತ್ರಿಗಳೇ ಎಲ್ಲಾ ಅಕ್ರಮಗಳಿಗೆ ಗಾಡ್ ಫಾದರ್ ಆಗಿ ನಿಂತಿರುವಾಗ ಇನ್ನು ಭ್ರಷ್ಟರಿಗೆಯಾವ ಭಯ? ವಿಪಕ್ಷದವರಾದ ನಾವು ಹೇಳಿದರೆ ರಾಜಕೀ ಯ ಎನ್ನುವ ಕಾಂಗ್ರೆಸ್ಸಿಗರು ಈಗೇನು ಹೇ ಳುತ್ತಾರೆ? ಇನ್ನೂ ಸಹ ಯಾವ ಮುಖ ಇಟ್ಟು ಕೊಂಡು ಆಡಳಿತ ನಡೆಸುತ್ತಿದ್ದಾರೆ? ಕಿಂಚಿತ್ತಾದ ರೂ ಮರ್ಯಾದೆ ಉಳಿದಿದ್ದರೆ ಕೂಡಲೇ ರಾ ಜ್ಯದ ಜನತೆಯ ಕ್ಷಮೆಯಾಚಿಸಿ ರಾಜೀನಾಮೆ ಕೊಟ್ಟು ತೊಲಗಲಿ ಎಂದು ಶಾಸಕ ಕಾಮತ್ ಆಗ್ರಹಿಸಿದರು.

# ಜಮೀರ್‌ಅಹಮದ್ ತಕ್ಷಣ ರಾಜೀನಾಮೆ ನೀಡಲಿ– ಗೋಪಾಲಕೃಷ್ಣ ಬೇಳೂರು

**ಒಂದನೇ ಪುಟದಿಂದ......**

ತಕ್ಷಣ ತಮ್ಮ ಹುದ್ದೆಗೆ ರಾಜೀನಾಮೆ ನೀಡಿ, ತನಿಖೆ ಎದುರಿಸಲಿ. ಅವರು ಭ್ರಷ್ಟಾಚಾರ ಮಾಡಿಲ್ಲ ಎಂದು ಸಾಬೀತಾದರೆ ಮತ್ತೆತಮ್ಮ ಮಂತ್ರಿ ಸ್ಥಾನಕ್ಕೆ ಬರಲಿ ಎಂದು ಅವರು ಆಗ್ರಹಿಸಿದರು. ರಾಜೀವ್‌ಗಾಂಧಿ ವಸತಿಯೋಜನೆಗೆ ಸಂಬಂಧಿಸಿದಂತೆ ಆಳಂದ ಶಾಸಕ ಬಿ.ಆರ್.ಪಾಟೀಲ್ ಮಾಡಿರುವ ಆರೋಪದ ಸತ್ಯ ಹೊರ ಬರಬೇಕಾದರೆ ಸಚಿವರು ರಾಜೀನಾಮೆ ನೀಡುವುದು ಸೂಕ್ತ. ಪಕ್ಷದ ಶಾಸಕರೇ ಸಚಿವರ ಮೇಲೆ ಈ ರೀತಿ ಆರೋಪ ಮಾಡುವುದರಿಂದ ಪಕ್ಷದಲ್ಲಿಗೊಂದಲ ಉಂಟಾಗುತ್ತದೆ. ಆರೋಪ ಸತ್ಯವೋ, ಸುಳ್ಳೋ ಎಂಬುದು ಸಾಬೀತಾಗಬೇಕು. ಸತ್ಯಾಂಶ ಹೊರ ಬರಬೇಕು. ಈ ಹಿನ್ನೆಲೆಯಲ್ಲಿ ಸಚಿವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ತನಿಖೆ ಎದುರಿಸುವುದು ಸೂಕ್ತ ಎಂದರು. ಸಚಿವರ ಮೇಲೆ ಇಂತಹ ಆರೋಪಗಳು ಹೊಸದಲ್ಲ. ಈ ಹಿಂದೆ ನಾಗೇಂದ್ರ ಅವರ ಮೇಲೆ ಇಂತಹ ಆರೋಪ ಬಂದಾಗ ಮುಖ್ಯಮಂತ್ರಿಯವರ ಸಲಹೆಯಂತೆ ಅವರು ರಾಜೀನಾಮೆ ಕೊಟ್ಟರು. ಇಂತಹ ಹಲವು ಉದಾಹರಣೆಗಳಿವೆ. ಅದೇರೀತಿ ಈಗ ವಸತಿ ಸಚಿವರು ರಾಜೀನಾಮೆಕೊಡುವುದು ಸೂಕ್ತ ಎಂದರು.

# ನಿರ್ಭೀತ ವರದಿಗಾರಿಕೆಯಿಲ್ಲದ ಪತ್ರಿಕೋದ್ಯಮ ಅರ್ಥಹೀನ: ಸುಧೀರ್‌ಕುಮಾರ್ ರೆಡ್ಡಿ

**ಒಂದನೇ ಪುಟದಿಂದ......**

ಧೈರ್ಯ ತಾನಾಗಿಯೇ ಬರುತ್ತದೆ. ಯಾವುದಕ್ಕೂ ಭಯ ಪಡುವ ಅಗತ್ಯ ಇರುವುದಿಲ್ಲ ಎಂದು ಪತ್ರಕರ್ತರಿಗೆ ಕಿವಿಮಾತು ಹೇಳಿದರು. ಬಹಳ ವರ್ಷಗಳ ಹಿಂದೆ ರುವಾಂಡದಲ್ಲಿ ನರಮೇಧ ನಡೆದಿತ್ತು. ಬಳಿಕ ಅಲ್ಲಿ ಸಮುದಾಯಗಳು ಪರಸ್ಪರ ಪ್ರತ್ಯೇಕಗೊಂಡಿದ್ದವು. ಒಬ್ಬರಿಗೊಬ್ಬರು ಮಾತುಕತೆಯೇ ಇರಲಿಲ್ಲ. ಆದರೆ ಅಲ್ಲಿನ ರೇಡಿಯೋ, ಮಾಧ್ಯಮ ಸುದ್ದಿಗಳು ಅಲ್ಲಿ ನಡೆಯುತ್ತಿದ್ದ ಒಳ್ಳೆಯತನವನ್ನು ಎತ್ತಿ ತೋರಿಸಿದವು. ನಿಧಾನಗತಿಯಲ್ಲಿ ಸಮುದಾಯಗಳ ನಡುವಿನ ಅನುಮಾನ ದೂರವಾಯಿತು ಎಂದು ತಿಳಿಸಿದರು.

# ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಮಂಗಳೂರು – ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ಸಹಾಯಧನ/ ಸಾಲ–ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ನಿಗಮದ ಕೇಂದ್ರ ಕಛೇರಿಯ ದೂರವಾಣಿ ಸಂಖ್ಯೆ 78998 99039 ಅಥವಾ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಕಛೇರಿಗಳಲ್ಲಿ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವ ಸಂಘಗಳಿಗೆ ಕ್ರೀಡಾ ಕಿಟ್: ಅರ್ಜಿ ಆಹ್ವಾನ

ಮಂಗಳೂರು – ಗ್ರಾಮೀಣ ಯುವಜನತೆಯು ಆರೋಗ್ಯಕರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಸಹಾಯಕವಾಗುವ ವಾತಾವರಣವನ್ನು ಸೃಜಿಸಲು 2025–26ನೇ ಸಾಲಿನ ಯುವ ಚೈತನ್ಯ ಯೋಜನೆಯಡಿ ರಾಜ್ಯದ ಆಯ್ದ ಯುವ ಸಂಘಗಳಿಗೆ ಕ್ರೀಡಾ ಸಾಮಾಗ್ರಿಗಳನ್ನು ಒದಗಿಸಲು ಯುವನೀತಿ ಅನುಷ್ಠಾನದ ಅಡಿಯಲ್ಲಿ ಅನುದಾನ ನಿಗದಿಪಡಿಸಲಾಗಿದೆ. ಆಸಕ್ತ ಯುವಕ/ ಯುವತಿ ಸಂಘಗಳು ಆನ್‌ಲೈನ್ ಮೂಲಕ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಮಾನ್ಯತೆ ಪಡೆಯುವಂತೆ ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ದೂರವಾಣಿ ಸಂಖ್ಯೆ: 0824-2451264 ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿ.ಟಿ.ಸಿ.ಸಿ: ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಂಗಳೂರು – 2025–26 ನೇ ಸಾಲಿನ ಬೈಕಂಪಾಡಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ದಲ್ಲಿ ಡಿಪ್ಲೋಮಾ ಕೋರ್ಸ್‌ಗಳ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ನಗರದ ಬೈಕಂಪಾಡಿ, ಕೈಗಾರಿಕಾ ವಲಯದ ಪ್ಲಾಟ್ ನಂ. 7ಇ, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ದೂ.ಸಂ:8073208137, 7899070548, 0824–2408003) ಸಂಪರ್ಕಿಸಬಹುದು ಎಂದು ಜಿ.ಟಿ.ಸಿ.ಸಿ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಲ್ಮೀಕಿ ಭವನ ನಿರ್ವಹಣಾ ಸಮಿತಿ ಸದಸ್ಯತ್ವಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : ಭದ್ರಾವತಿ ತಾಲೂಕು ಕೇಂದ್ರದಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಸಮುದಾಯ ಭವನ ನಿರ್ವಹಣಾ ಸಮಿತಿಯನ್ನು ರಚಿಸಲು ಪರಿಶಿಷ್ಟ ಪಂಗಡಕ್ಕೆ ಸೇರಿದ 03 ಸದಸ್ಯರನ್ನು ನಾಮ ನಿರ್ದೇಶನ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತಾಲೂಕು ಪಂಚಾಯತ್ ಹಿಂಭಾಗ, ಭದ್ರಾವತಿ ಇವರನ್ನು ಸಂಪರ್ಕಿಸುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪದ್ಮಶ್ರೇಣಿ ಪ್ರಶಸ್ತಿಗಳಿಗಾಗಿ ಪರಿಶಿಷ್ಟ ಪಂಗಡದವರಿಂದ ಅರ್ಜಿ ಆಹ್ವಾನ

ಶಿವಮೊಗ್ಗ : 2026ನೇ ಸಾಲಿನ ದೇಶದ ನಾಗರೀಕ ಪ್ರಶಸ್ತಿಗಳಾದ ಪದ್ಮಶ್ರೀ, ಪದ್ಮಭೂಷಣ, ಪದ್ಮವಿಭೂಷಣ ಪ್ರಶಸ್ತಿಗಳಿಗೆ ಜಿಲ್ಲೆಯಲ್ಲಿ ಕಲೆ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ವೈದ್ಯಕೀಯ, ಸಮಾಜ ಸೇವೆ, ವಿಜ್ಞಾನ ಮತ್ತು ಇಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು, ನಾಗರೀಕ ಸೇವೆ, ವ್ಯಾಪಾರ ಮತ್ತು ಕೈಗಾರಿಕೆ ಇತ್ಯಾದಿ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಪ.ಪಂ.ದ ಅರ್ಹರಿಂದ ಆನ್‌ಲೈನ್‌ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಶಿವಮೊಗ್ಗ, ದೂ.ಸಂ.: 08182–200266ನ್ನು ಹಾಗೂ ಎಲ್ಲಾ ತಾಲ್ಲೂಕು ಸಹಾಯಕ ನಿರ್ದೇಶಕರುಗಳನ್ನು ಸಂಪರ್ಕಿಸುವಂತೆ ಶ್ರೀನಿವಾಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಯಂತ್ರೋಪಕರಣಗಳಿಗೆ ಅರ್ಜಿ ಆಹ್ವಾನ

ಮಡಿಕೇರಿ : ಪ್ರಸಕ್ತ (2025–26) ಸಾಲಿನಲ್ಲಿ ಕೃಷಿ ಯಾಂತ್ರೀಕರಣ ಮತ್ತು ಕೃಷಿ ಉತ್ಪನ್ನಗಳ ಸಂಸ್ಕರಣ ಕಾರ್ಯಕ್ರಮದಡಿಯಲ್ಲಿ ಸಾಮಾನ್ಯ ವರ್ಗದ ರೈತರಿಗೆ ಶೇ.50ರ ರಿಯಾಯಿತಿಯಲ್ಲಿ ಕೃಷಿ ಯಂತ್ರೋಪಕರಣ ಲಭ್ಯವಿದೆ. ಅರ್ಜಿಯನ್ನು ಹೋಬಳಿಯ ರೈತ ಸಂಪರ್ಕ ಕೇಂದ್ರಗಳಿಗೆ ಸಲ್ಲಿಸುವಂತೆ ಸೋಮವಾರಪೇಟೆ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು ಕೋರಿದ್ದಾರೆ.

# ಸಿಬ್ಬಂದಿ ನೇಮಕಾತಿಗೆ ಅರ್ಜಿ ಆಹ್ವಾನ

ಮಡಿಕೇರಿ : ಕೊಡಗು ಜಿಲ್ಲೆ ಕೃಷಿ ಇಲಾಖೆಯ ಕೃಷೋನ್ನತಿ ಕೃಷಿ ವಿಸ್ತರಣೆ ಉಪ ಅಭಿಯಾನ (ಆತ್ಮ) ಯೋಜನೆಯಡಿ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರ 1 ಹುದ್ದೆಯನ್ನು ಒಪ್ಪಂದದ ಆಧಾರದ ಮೇಲೆ 2025–26ನೇ ಸಾಲಿನ ಸೀಮಿತ ಅವಧಿಗೆ ವಿರಾಜಪೇಟೆ ತಾಲ್ಲೂಕಿನಲ್ಲಿ ಖಾಲಿ ಇರುವ ಹುದ್ದೆಗೆ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಆತ್ಮ ವಿಭಾಗ, ಕೊಡಗು ಜಿಲ್ಲೆ, ಮಡಿಕೇರಿ ಇವರನ್ನು ಸಂಪರ್ಕಿಸಬಹುದು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ಎಲೆಕ್ಟ್ರಿಕ್ ಬಸ್ ಘಟಕ ನಿರ್ಮಾಣಕ್ಕೆ ಜಮೀನು ನೀಡಲು ಸೂಚನೆ




ಮಂಗಳೂರು: ದ.ಕ.ಜಿಲ್ಲೆಯ ಕೆಎಸ್ಸಾರ್ಟಿಸಿ ಮಂಗಳೂರು ವಿಭಾಗಕ್ಕೆ ಪಿಎಂಇ ಬಸ್ ಸೇವಾ ಯೋಜನೆಯಡಿ 100 ಎಲೆಕ್ಟ್ರಿಕ್ ಬಸ್‌ಗಳ ಘಟಕ ನಿರ್ಮಾಣಕ್ಕೆ ಜಮೀನು ಮಂಜೂರು ಮಾಡಲು ದ.ಕ.ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ದ.ಕ.ಜಿಲ್ಲಾಧಿಕಾರಿಗೆ ಸೂಚನೆ ನೀಡಿದ್ದಾರೆ. ಈ ಎಲೆಕ್ಟ್ರಿಕ್ ಬಸ್‌ಗಳು ನಗರದಲ್ಲಿ ಕಾರ್ಯಾಚರಿಸಲು ಪಂಪ್‌ವೆಲ್‌ನಲ್ಲಿ ಮಂಗಳೂರು ನಗರ ಪಾಲಿಕೆ ವಶಪಡಿಸಿಕೊಂಡಿರುವ 7 ಎಕರೆ ಜಮೀನನ್ನು ಕೆಎಸ್ಸಾರ್ಟಿಸಿ ನಿಗಮಕ್ಕೆ ಉಚಿತವಾಗಿ ಹಸ್ತಾಂತರಿಸುವಂತೆ ಸೂಚನೆ ನೀಡಿದ್ದಾರೆ. ಅಲ್ಲದೆ ಈ ಇಲೆಕ್ಟ್ರಿಕಲ್ ಬಸ್ ಘಟಕ ಹಾಗೂ ವಿಭಾಗೀಯ ಕಾರ್ಯಾಗಾರ ನಿರ್ಮಿಸಲು ಉಳ್ಳಾಲ ತಾಲೂಕಿನ ಮುಡಿಪುವಿನ ಬಾಳೆಪುಣಿ ಗ್ರಾಮದ ಸರ್ವೆ ನಂ.87ರಲ್ಲಿ 9.90 ಎಕರೆ ಪಂಚಾಯತ್ ಜಮೀನನ್ನು ನಿಗಮಕ್ಕೆ ಉಚಿತವಾಗಿ ನೀಡಲು ಸಚಿವ ದಿನೇಶ್ ಗುಂಡೂರಾವ್ ಸೂಚಿಸಿದ್ದಾರೆ.


# ಕಾಂಗ್ರೆಸ್ ಸರ್ಕಾರ ಅಂಬೇಡ್ಕರ್‌ಗೆ ಅಗೌರವ ತೋರಿಸುತ್ತಿದೆ–ಕ್ಯಾ. ಚೌಟ

ಗುರುಪುರ: ರಾಜ್ಯದ ಪ್ರಗತಿಗೆ ಅದರಲ್ಲಿಯೂ ಅವಿಭಜಿತ ದಕ್ಷಿಣ ಕನ್ನಡದ ಅಭಿವೃದ್ಧಿಯನ್ನು ಸಂಪೂರ್ಣವಾಗಿ ಮರೆತಿರುವ ಸಿಎಂ ಸಿದ್ದರಾಮಯ್ಯ ನೇತೃತ್ವದ ಜನವಿರೋಧಿ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರದಿಂದ ಕಿತ್ತೊಗೆಯುವುದಕ್ಕೆ ಜನಾಂದೋಲವನ್ನು ರೂಪಿಸುವವರೆಗೆ ಬಿಜೆಪಿ ವಿರಮಿಸುವುದಿಲ್ಲ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಹೇಳಿದ್ದಾರೆ. ರಾಜ್ಯ ಸರ್ಕಾರದ ಜನ ವಿರೋಧಿ ನೀತಿಗಳನ್ನು ಖಂಡಿಸಿ ಭಾರತೀಯ ಜನತಾ ಪಕ್ಷವು ಗುರುಪುರ ಗ್ರಾಮ ಪಂಚಾಯತ್ ಕಚೇರಿ ಮುಂದೆ ನಡೆಸಿದ ಧರಣಿ ಸತ್ಯಾಗ್ರಹದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದ್ದು, ಅನಾಚಾರ, ದುರಾಡಳಿತ, ಜನವಿರೋಧಿ ನೀತಿಗಳಿಂದಾಗಿ ಕರ್ನಾಟಕದಲ್ಲಿ ತುರ್ತು ಪರಿಸ್ಥಿತಿ ಹೇರಬೇಕಾದ ಆತಂಕದ




ವಾತಾವರಣ ನಿರ್ಮಾಣವಾಗುತ್ತಿದೆ. ಭ್ರಷ್ಟಾಚಾರದ ಮೂಲಕ ಈ ಕಾಂಗ್ರೆಸ್ ಸರ್ಕಾರವು ರಾಜ್ಯವನ್ನು ಲೂಟಿ ಹೊಡೆಯುತ್ತಿದ್ದು, ಪ್ರತಿಯೊಂದು ಇಲಾಖೆಯಲ್ಲಿಯೂ ಬರೀ ವಸೂಲಿ–ಸುಲಿಗೆಕೋರರೇ ದರ್ಬಾರು ನಡೆಸುತ್ತಿದ್ದಾರೆ. ಒಟ್ಟಾರೆ ದುರಾಡಳಿತದ ಈ ಸರ್ಕಾರ ರಾಜ್ಯದ ಆರ್ಥಿಕ ಸ್ಥಿತಿಯನ್ನು ಅದೋಗತಿಗೆ ದೂಡಿದೆ ಎಂದು ಕ್ಯಾಪ್ಟನ್ ಬ್ರಿಜೇಶ್ ಚೌಟ ಆರೋಪಿಸಿದ್ದಾರೆ.

# ಜನಸೇವೆ ಮಾಡುವುದು ಸುಲಭದ ಕೆಲಸವಲ್ಲ : ಅಶೋಕ್ ರೈ




ಪುತ್ತೂರು: ಜನಸೇವೆ ಮಾಡುವುದು ಅಷ್ಟೊಂದು ಸುಲಭದ ಕೆಸಲವಲ್ಲ. ಕಷ್ಟಗಳನ್ನು ಅನುಭವಿಸಿದವರಿಗೆ ಮಾತ್ರ ಇನ್ನೊಬ್ಬರ ಕಷ್ಟಗಳ ಅರಿವಾಗುತ್ತದೆ. ಎಂ ಫ್ರೆಂಡ್ಸ್ ಚಾರಿಟೇಬಲ್ ಟ್ರಸ್ಟ್ ಈ ನಿಟ್ಟಿನಲ್ಲಿ ಬಹಳ ಪ್ರಾಮಾಣಿಕವಾಗಿ ಜನಸೇವೆ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದು ಪುತ್ತೂರು ಶಾಸಕ ಅಶೋಕ್ ಕುಮಾರ್ ರೈ ಹೇಳಿದರು. ಎಂ. ಫ್ರೆಂಡ್ಸ್ ಚಾರಿಟೇಬಲ್ ಟ್ರಸ್ಟ್ ಮಂಗಳೂರು ವತಿಯಿಂದ ನಡೆಸಲ್ಪಡುವ 'ಕ್ಲಾಸ್ ಆನ್ ವೀಲ್ಸ್' ಗ್ರಾಮೀಣ ವಿದ್ಯಾರ್ಥಿಗಳ ಕಂಪ್ಯೂಟರ್ ಕಲಿಕಾ ಬಸ್‌ನ ಶಾಶ್ವತ ಪ್ರಾಯೋಜಕತ್ವವನ್ನು ಬಜ್ಜೆಗುತ್ತು ದಿ. ಹಾಜಿ ಬಿ ಶೇಕುಂಞ ಸ್ಮರಣಾರ್ಥ ಕಾರ್ಯಕ್ರಮವನ್ನು ಪುತ್ತೂರಿನ ಚುಂಚಶ್ರೀ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಶಾಸಕರು ಉದ್ಘಾಟಿಸಿ ಮಾತನಾಡಿದರು. ಇಂತಹ ಟ್ರಸ್ಟುಳು ಜನರ ಕಷ್ಟಗಳಿಗೆ ಸ್ಪಂದಿಸಲು ಸಾಧ್ಯವಿದೆ ಎಂಬ ವಿಚಾರ ಮತ್ತು ಆ ಬಗ್ಗೆ ಸ್ಪಷ್ಟವಾದ ಅರಿವು ನನಗಿದೆ. ದುಡ್ಡಿದ್ದ ಮಾತ್ರಕ್ಕೆ ಜನಸೇವೆ ಮಾಡಬಹುದು ಎಂದು ಹೇಳಲಾಗುವುದಿಲ್ಲ. ಅದು ಅಷ್ಟೊಂದು ಸುಲಭವೂ ಅಲ್ಲ. ಇದಕ್ಕೆ ತುಂಬಾ ಪ್ರಾಮಾಣಿಕತೆ ಮತ್ತು ಕಾಳಜಿ ಇರಬೇಕು. ಈ ನಿಟ್ಟಿನಲ್ಲಿ ಎಂ ಫ್ರೆಂಡ್ಸ್ ಚಾರಿಟೇಬಲ್ ಟ್ರಸ್ಟ್ ದೇಶ ಮತ್ತು ದೇವರು ಮೆಚ್ಚುವಂತಹ ಮಾದರಿಯಾದ ಕೆಲಸ ಮಾಡುತ್ತಿದೆ ಎಂದರು.

# ಲೋಕಸಭಾಧ್ಯಕ್ಷರನ್ನು ಭೇಟಿ ಮಾಡಿದ ವಿಧಾನಸಭಾಧ್ಯಕ್ಷರು

ಮಂಗಳೂರು : ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರನ್ನು ಬುಧವಾರ ಹೊಸದಿಲ್ಲಿಯಲ್ಲಿ ಭೇಟಿ ಮಾಡಿ 11ನೇ ಕಾಮನ್‌ವೆಲ್ತ್ ಸಂಸದೀಯ ಸಂಘ ಭಾರತ ವಲಯದ ಸಮ್ಮೇಳನವನ್ನು ಸೆ.9 ಮತ್ತು 10ರಂದು ನಡೆಸಲು ಕರ್ನಾಟಕವನ್ನು ಆಯ್ಕೆ ಮಾಡಿದಕ್ಕಾಗಿ ಕೃತಜ್ಞತೆಗಳನ್ನು ಸಲ್ಲಿಸಿದರು. ಸಮ್ಮೇಳನದಲ್ಲಿ ಭಾರತದ ಎಲ್ಲಾ ರಾಜ್ಯಗಳ ಪೀಠಾಸೀನ ಅಧಿಕಾರಗಳು ಭಾಗವಹಿಸುವುದಲ್ಲದೇ ಪ್ರಥಮ ಬಾರಿಗೆ ಅಂತರ್‌ರಾಷ್ಟ್ರೀಯ ಮಟ್ಟದ ಕಾಮನ್‌ವೆಲ್ತ್ ದೇಶಗಳ ಪೀಠಾಸೀನಾಧಿಕಾರಿಗಳನ್ನು ಆಹ್ವಾನಿ ಸುವ ಕುರಿತು ಮತ್ತು ಸಮ್ಮೇಳನದಲ್ಲಿ ಚರ್ಚಿಸಬೇಕಾದ ವಿಷಯಗಳ ಕುರಿತು ಸಹ ಸಮಾಲೋಚನೆ ನಡೆಸಿದರು. ಸಮ್ಮೇಳನದ ಉದ್ಘಾಟನಾ ಸಮಾರಂಭವನ್ನು ಸೆ.8ರಂದು ವಿಧಾನಸೌಧದ ಬೃಹತ್ ಮೆಟ್ಟಲು




ಗಳ ಮೇಲೆ ಹಮ್ಮಿಕೊಳ್ಳುವ ಬಗ್ಗೆ ಹಾಗೂ ಕರ್ನಾಟಕ ವಿಧಾನಸಭೆಯಲ್ಲಿ ಇತ್ತೀಚೆಗೆ ಜಾರಿಗೆ ತಂದಿರುವ ಅನೇಕ ಪ್ರಗತಿ ಪರ ಬದಲಾವಣೆಗಳನ್ನು ಸಹ ಲೋಸಭಾಧ್ಯಕ್ಷರ ಗಮನಕ್ಕೆ ತಂದರು. ಬೆಂಗಳೂರು ನಗರ ಅಂತರ್‌ರಾಷ್ಟ್ರೀಯವಾಗಿ ಸಿಲಿಕಾನ್ ಸಿಟಿಯಾಗಿರುವುದರಿಂದ ಇಂತಹ ಸಮ್ಮೇಳನಗಳನ್ನು ನಡೆಸುತ್ತಿರುವುದು ಅತ್ಯಂತ ಸೂಕ್ತ ಎಂದು ಲೋಕಸಭಾಧ್ಯಕ್ಷರು ಅಭಿಪ್ರಾಯಪಟ್ಟರು.

# ವಿದ್ಯಾರ್ಥಿ ಚಳವಳಿಯ ನಾಶ ಕೋಮುವಾದ ಬೆಳೆವಣಿಗೆಗೆ ಕಾರಣ



ಮಂಗಳೂರು: ಕರಾವಳಿಯಲ್ಲಿ ವಿದ್ಯಾರ್ಥಿ ಚಳವಳಿಯ ನಾಶ ಕೋಮುವಾದ ಬೆಳೆಯಲು ಕಾರಣವಾ ಯಿತು ಎಂದು ಜನಪದ ವಿದ್ವಾಂಸ ಡಾ. ಗಣನಾಥ ಶೆಟ್ಟಿ ಎಕ್ಕಾರು ತಿಳಿಸಿದ್ದಾರೆ. ಬಲಪಂಥೀಯ ಸಂಘಟನೆಯ ಗೂಂಡಾಗಳಿಂದ ಹತ್ಯೆಯಾದ ಡಿವೈಎಫ್‌ಐ ಮುಖಂಡ ಶ್ರೀನಿವಾಸ್ ಬಜಾಲ್ ಹತ್ಯೆಯಾಗಿ 23 ವರ್ಷ ಸಂದಿರುವ ಸಂದರ್ಭ ಅವರ ನೆನಪಲ್ಲಿ ಮಂಗಳವಾರ ನಗರದ ಸಹೋದಯ ಸಭಾಂಗಣದಲ್ಲಿ 'ತುಳುನಾಡಿನ ಸೌಹಾರ್ದ ಪರಂಪರೆ , ಕೋಮುವಾದ ಒಡ್ಡಿರುವ ಸವಾಲುಗಳು' ಎಂಬ ವಿಷಯದಲ್ಲಿ ಆಯೋಜಿಸಲಾದ ವಿಚಾರ ಸಂಕಿರಣದಲ್ಲಿ ವಿಚಾರ ಮಂಡಿಸಿದರು. 1970–80ರ ದಶಕದಲ್ಲಿ ಮಂಗಳೂರಿನಲ್ಲಿ ವಿದ್ಯಾರ್ಥಿಗಳ ನಡುವೆ ಗಲಾಟೆ ಆಗುತ್ತಿತ್ತು. ಆದರೆ ಅದರಲ್ಲಿ ಕೋಮುವಾದ ಇರಲಿಲ್ಲ. ರಾಜಕೀಯ ಮೇಲಾಟ ಇತ್ತು. ಆದರೆ ಈ ಗಲಾಟೆ ವ್ಯಕ್ತಿತ್ವ ನಾಶ ಮಾಡುವಷ್ಟು ಇರಲಿಲ್ಲ ಎಂದು ವಿವರಿಸಿದರು. ವಿದ್ಯಾರ್ಥಿ ಚಳವಳಿಯ ನಾಶ ಕೋಮುವಾದಕ್ಕೆ ಎಡೆ ಮಾಡಿಕೊಟ್ಟಿತು. ದ.ಕ, ಉಡುಪಿ ಜಿಲ್ಲೆಯಲ್ಲಿ ಪ್ರಗತಿಪರ ವಿದ್ಯಾರ್ಥಿಗಳ ಸಂಘಟನೆಗಳು ವೀಕ್ ಆಗಿದೆ ಎಂದರು. ಶಿಕ್ಷಣ ಮಾಫಿಯಾ ಎಲ್ಲ ವಿದ್ಯಾರ್ಥಿ ಚಳವಳಿ ಸೇರಿದಂತೆ ಎಲ್ಲವನ್ನು ನಾಶ ಮಾಡಿದೆ ಎಂದು ಅಭಿಪ್ರಾಯಪಟ್ಟರು.


# ಪ್ರಾಣಿಗಳ ಮಾರಾಟ ಮಳಿಗೆ ನೋಂದಣಿ ಕಡ್ಡಾಯ




ಮಂಗಳೂರು : ದ.ಕ.ಜಿಲ್ಲಾ ಪ್ರಾಣಿ ದಯಾ ಸಂಘದ ಸಭೆಯು ಜಿಲ್ಲಾಧಿಕಾರಿ ದರ್ಶನ್ ಎಚ್. ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆಯಿತು. ಈ ಸಂದರ್ಭ ಮಾತನಾಡಿದ ಡಿಸಿ ಪ್ರಾಣಿ ಹಿಂಸೆ ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮುದ್ದು ಪ್ರಾಣಿಗಳ ಮಾರಾಟ ಮಳಿಗೆ ಕಡ್ಡಾಯವಾಗಿ ಪ್ರಾಣಿಗಳ ಮೇಲಿನ ಕ್ರೌರ್ಯ ತಡೆಗಟ್ಟುವಿಕೆ ಸೊಸೈಟಿಯಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು. ಎಸ್‌ಪಿಸಿಎ ನೋಂದಣಿ ಪಡೆಯದೆ ಕಾರ್ಯನಿರ್ವಹಿಸುತ್ತಿರುವ ಪೆಟ್ ಶಾಪ್‌ಗಳ ಮಾಲಕರಿಗೆ ಕಾಲಮಿತಿ ನಿಗದಿಪಡಿಸಿ, ನಿಗದಿತ ಕಾಲಮಿತಿಯೊಳಗೆ ನೋಂದಣಿ ಪಡೆಯದ ಮಾಲಕರ ವಿರುದ್ಧ ಅಗತ್ಯ ಕಾನೂನು ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ವ್ಯಾಪ್ತಿಯಲ್ಲಿರುವ ನಿರಾಶ್ರಿತ ಪ್ರಾಣಿಗಳಿಗೆ ಅಗತ್ಯ ಶುಶೂಷೆ ಕೊಡುವ ನಿಟ್ಟಿನಲ್ಲಿ ಮಂಗಳೂರು ತಾಲೂಕಿನ ಬೊಂಡಂತಿಲ ಗ್ರಾಮದಲ್ಲಿ ಪ್ರಾಣಿ ಮಿತ್ರ ಆಸ್ಪತ್ರೆ ತೆರೆಯುವ ಯೋಜನೆ ಅನುಷ್ಠಾನದ ಕುರಿತು ಹಾಗೂ ರಸ್ತೆ ಅಪಘಾತ ಮತ್ತಿತರ ಕಾರಣಗಳಿಂದ ಸತ್ತ ಪ್ರಾಣಿಗಳನ್ನು ಯಾರೂ ಸಹ ಮುಟ್ಟುವುದಿಲ್ಲ. ಅವುಗಳ ಮೃತದೇಹ ಅಲ್ಲಿಯೇ ಕೊಳೆಯುತ್ತಿರುತ್ತವೆ. ಪ್ರಾಣಿಗಳ ಅಂತ್ಯಸಂಸ್ಕಾರಕ್ಕೆ ಸ್ಮಶಾನ ಸೌಲಭ್ಯದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

# ಎಸ್.ಬಾಲನ್ ಸರಕಾರಿ ಅಭಿಯೋಜಕರಾಗಿ ನೇಮಕ?

ಮಂಗಳೂರು: ನಗರ ಹೊರವಲಯದ ಕುಡುಪು ಸಮೀಪದ ಸಾಮ್ರಾಟ್ ಮೈದಾನದಲ್ಲಿ ಎ. 27ರಂದು ಗುಂಪು ಥಳಿತದಿಂದ ಹತ್ಯೆಗೀಡಾದ ಕೇರಳದ ವಯನಾಡಿನ ಸುಲ್ತಾನ್ ಬತ್ತೇರಿ ತಾಲೂಕಿನ ಪುಲ್ಪಳ್ಳಿ ಗ್ರಾಮದ ಅಶ್ರಫ್ ಮತ್ತು ಬಂಟ್ವಾಳ ತಾಲೂಕಿನ ಕಲ್ಪನೆಯ ಕಾಗುಡ್ಡೆ ಎಂಬಲ್ಲಿ ದುಷ್ಕರ್ಮಿಗಳಿಂದ ಮೇ 27ರ ಸಂಜೆ ಹತ್ಯೆಯಾದ ಬಡಗ ಬೆಳ್ಳೂರು ಗ್ರಾಮದ ಕೊಳತ್ತಮಜಲಿನ ಅಬ್ದುಲ್ ರಹ್ಮಾನ್ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹಿರಿಯ ನ್ಯಾಯವಾದಿ ಎಸ್.ಬಾಲನ್ ಅವರನ್ನು ವಿಶೇಷ ಸರಕಾರಿ ಅಭಿಯೋಜಕರಾಗಿ ನೇಮಿಸುವ ಬಗ್ಗೆ ವರದಿಯಾಗಿದೆ. ಹತ್ಯೆಯಾದ ಇಬ್ಬರ ಕುಟುಂಬದ ಸದಸ್ಯರು ಪ್ರಕರಣದ ಸಮಗ್ರ ತನಿಖೆ ನಡೆದು ಎಲ್ಲ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಆಗ್ರಹಿಸಿದ್ದರು.




ಅದಕ್ಕಾಗಿ ಎರಡೂ ಕೊಲೆಗಳ ವಿಚಾರಣೆಯಲ್ಲಿ ವಿಶೇಷ ಸರಕಾರಿ ಅಭಿಯೋಜಕರಾಗಿ ಎಸ್. ಬಾಲನ್‌ರನ್ನು ಅವರನ್ನು ನೇಮಿಸಬೇಕು ಎಂದು ಸ್ಪೀಕರ್ ಯು.ಟಿ. ಖಾದರ್ ಗೃಹ ಮತ್ತು ಕಾನೂನು ಸಚಿವರಲ್ಲಿ ಚರ್ಚಿಸಿ, ಮನವಿ ಮಾಡಿದ್ದರು. ಆ ಹಿನ್ನಲೆಯಲ್ಲಿ ಸರಕಾರವು ಎಸ್. ಬಾಲನ್‌ರನ್ನು ವಿಶೇಷ ಸರಕಾರಿ ಅಭಿಯೋಜಕರಾಗಿ ನೇಮಿಸುವ ಬಗ್ಗೆ ಪರಿಶೀಲಿಸುತ್ತಿದೆ ಎನ್ನಲಾಗಿದೆ.


# ಆಗಸ್ಟ್ 1 ಮತ್ತು 2ರಂದು "ಆಳ್ವಾಸ್ ಪ್ರಗತಿ –2025"




ಮಂಗಳೂರು : ಆಳ್ವಾಸ್ ಶಿಕ್ಷಣ ಪತಿಷ್ಠಾನದ ವತಿಯಿಂದ ಅಯೋಜಿಸಲ್ಪಡುತ್ತಿರುವ ಹದಿನೈದನೇ ಆವೃತ್ತಿಯ ಬೃಹತ್ ಉದ್ಯೋಗ ಮೇಳ ಆಗಸ್ಟ್ 1 ಹಾಗೂ 2ರಂದು ಮೂಡಬಿದ್ರೆಯ ವಿದ್ಯಾಗಿರಿಯ ಕಾಲೇಜು ಆವರಣದಲ್ಲಿ ನಡೆಯಲಿದೆ ಎಂದು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ. ಮೋಹನ್ ಆಳ್ವ ತಿಳಿಸಿದರು. 2007ರಲ್ಲಿ ಪ್ರಾರಂಭವಾದ ಅಳ್ವಾಸ್ ಪ್ರಗತಿ– ಉದ್ಯೋಗ ಮೇಳವು ವೃತ್ತಿ ಆಕಾಂಕ್ಷಿಗಳಿಗೆ ರಾಷ್ಟ್ರೀಯ ಹಾಗೂ ಅಂತರ್‌ರಾಷ್ಟ್ರೀಯ ಕಂಪೆನಿಗಳಲ್ಲಿ ಉದ್ಯೋಗ ಗಿಟ್ಟಿಸುವಲ್ಲಿ ಶ್ರೇಷ್ಠವೇದಿಕೆಯಾಗಿ ಜನಮಾನಸದಲ್ಲಿ ಹೆಸರುವಾಸಿಯಾಗಿದೆ. ಪ್ರತೀ ಉದ್ಯೋಗ ಮೇಳದಲ್ಲಿ ಸರಾಸರಿ 200ರಷ್ಟು ಪ್ರತಿಷ್ಠಿತ ಕಂಪೆನಿಗಳು ಪಾಲ್ಗೊಂಡು. ಇಲ್ಲಿವರೆಗೆ ಒಟ್ಟು 36,151 ಉದ್ಯೋಗಗಳನ್ನು ನೀಡಿದೆ. 61,517 ಅಭ್ಯರ್ಥಿಗಳು ವಿವಿಧ ಕಂಪೆನಿಗಳ ಶಾರ್ಟ್‌ಲಿಸ್ಟ್‌ನಲ್ಲಿ ಸೇರ್ಪಡೆಗೊಂಡಿದ್ದಾರೆ ಎಂದು ಮಾಹಿತಿ ನೀಡಿದರು. ಕಂಪೆನಿಗಳು ಪದವಿ ಮತ್ತು ಸ್ನಾತಕೋತ್ತರ ಪದವೀಧರರು, ವೈದ್ಯಕೀಯ ಮತ್ತು ಪ್ಯಾರಾ ಮೆಡಿಕಲ್, ಇಂಜಿನಿಯರಿಂಗ್, ಕಲಾ, ವಾಣಿಜ್ಯ ಹಾಗೂ ಮ್ಯಾನೇಜ್‌ಮೆಂಟ್, ಬೇಸಿಕ್ ಸೈನ್ಸ್ ನರ್ಸಿಂಗ್, ಐಟಿಐ, ಡಿಪ್ಲೋಮಾ ಪಿಯುಸಿ, ಎಸ್ಸೆಸ್ಸೆಲ್ಸಿ ಹಾಗೂ ಇತರ ಅರ್ಹ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲಿವೆ ಎಂದರು.

# ತುಳು ಭಾಷೆ ಬಳಕೆ ವಿವಾದ: ಸ್ಪಷ್ಟಿಕರಣ

ಮಂಗಳೂರು: ಗ್ರಾಮ ಪಂಚಾಯತ್ ಸಾಮಾನ್ಯ ಸಭೆಗಳಲ್ಲಿ ತುಳು ಭಾಷೆ ಬಳಕೆಗೆ ಸಂಬಂಧಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲು ಎಂದು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಹೊರ ಡಿಸಿದ್ದ ಸುತ್ತೋಲೆ ಭಾರೀ ವಿವಾದಕ್ಕೆ ಕಾರಣ ವಾಗಿದೆ. ಈ ಕ್ರಮಕ್ಕೆ ತೀವ್ರ ವಿರೋಧ ವ್ಯಕ್ತ ವಾಗುತ್ತಲೇ ಸ್ಪಷ್ಟಿಕರಣ ನೀಡಿರುವ ದ.ಕ. ಜಿಪಂ, ಗ್ರಾಪಂ ಸಾಮಾನ್ಯ ಸಭೆಗಳಲ್ಲಿ ತುಳು ಭಾಷೆ ಬಳಕೆ ಕುರಿತು ಯಾವುದೇ ನಿರ್ಬಂಧ– ನಿರ್ದೇಶನ ಆದೇಶ ನೀಡಿಲ್ಲ ಎಂದು ಹೇಳಿದೆ. ದ.ಕ. ಜಿಪಂಗೆ ಮನವಿಯ ಕುರಿತು ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಈ ಮೂಲಕ ಸೂಚಿಸಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಸುತ್ತೋಲೆ ಹೊರಡಿಸಿತ್ತು. ಇದರ ಪ್ರತಿಯೊಂದು ಸಾಮಾಜಿಕ ಜಾಲತಾ ಣದಲ್ಲಿ ವೈರಲ್ ಆಗಿದ್ದು, ಇದು ತುಳು ಪರ ಹೋರಾಟಗಾರರ ಆಕ್ರೋಶಕ್ಕೆ ಕಾರಣವಾಗಿತ್ತು. ತುಳು ಭಾಷೆ–ಕನ್ನಡ ನಾಡಿನ




ಮಣ್ಣಿನ ಭಾಷೆ. ನಮ್ಮ ಕರ್ನಾಟಕದಲ್ಲಿ ತುಳು ಮಾತನಾಡಬಾರದು ಎನ್ನುವ ಸರಕಾರದ ಆದೇಶ! ಹಾಗಾದರೆ, ಉರ್ದು ಭಾಷೆಯ ಬಳಕೆ ಸರಕಾರಿ ಕಡತದಲ್ಲಿ ಮಾಡಬಹುದೇ ? ಮಿಸ್ಟರ್ ಟ್ರೋಲ್ ಮಿನಿಸ್ಟರ್ ಎಲ್ಲಿದ್ದೀರಾ ? ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ ಜಿಪಂ ಸುತ್ತೋಲೆಯ ಫೋಟೋದೊಂದಿಗೆ ತನ್ನ ಎಕ್ಸ್' ಖಾತೆಯಲ್ಲಿ ಪೋಸ್ಟ್‌ವೊಂದನ್ನು ಹಾಕಿ ವಿರೋಧವನ್ನು ವ್ಯಕ್ತಪಡಿಸಿದ್ದರು.

# ಕುಚ್ಚೂರು–ಹೆಬ್ರಿ ರಸ್ತೆ ಸಂಪರ್ಕ ಕಡಿತ: ಡಿಸಿ ಪರಿಶೀಲನೆ



ಉಡುಪಿ : ಭಾರೀ ಮಳೆಯಿಂದ ಸಂಪರ್ಕ ಕಡಿತಗೊಂಡ ಹೆಬ್ರಿ –ಕುಚ್ಚೂರು ಸಂಪರ್ಕಿಸುವ ಬದಲಿ ರಸ್ತೆಯ ಸ್ಥಳಕ್ಕೆ ಉಡುಪಿ ಜಿಲ್ಲಾಧಿಕಾರಿ ಸ್ವರೂಪ ಟಿ. ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಇಲಾಖಾಧಿಕಾರಿಗಳ ನಿರ್ಲಕ್ಷದಿಂದ ಈ ಅನಾಹುತ ಉಂಟಾಗಿದೆ ಎಂದು ಆರೋಪಿಸಿ ಸಾಮಾಜಿಕ ಹೋರಾಟಗಾರ ಶ್ರೀಕಾಂತ್ ಕುಚ್ಚೂರು ಮನವಿ ಸಲ್ಲಿಸಿದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಸ್ವರೂಪ ಟಿ. ಸ್ಥಳ ಪರಿಶೀಲನೆ ನಡೆಸಿದರು. ಯಾವುದೇ ಕಾರಣಕ್ಕೂ ಸ್ಥಳೀಯರಿಗೆ ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗಬಾರದು. ಹಗಲು ವಾಹನ ಸಂಚಾರಕ್ಕೆ ಅವಕಾಶ ಕಲ್ಪಿಸಿ ರಾತ್ರಿ ವಾಹನ ಸಂಚಾರ ನಿಲ್ಲಿಸಿ ಬದಲಿ ಮಾರ್ಗದಲ್ಲಿ ಚಲಿಸುವಂತೆ ಸೂಚನೆ ನೀಡಬೇಕೆಂದು ಜಿಲ್ಲಾಧಿಕಾರಿ ಅಧಿಕಾರಿಗಳಿಗೆ ಸೂಚಿಸಿದರು.

# ಅಂಗಡಿ ಕೋಣೆ ಬಾಡಿಗೆಗೆ ಸಿಗುವುದಿಲ್ಲ !

ಮಂಗಳೂರು: ನಗರದ ಪಿವಿಎಸ್ ಪಕ್ಕದಲ್ಲಿರುವ ಪರಿಶಿಷ್ಟರಿಗೆ ಮೀಸಲಾದ ಡಾ.ಬಿ.ಆರ್. ಅಂಬೇಡ್ಕರ್ ವಾಣಿಜ್ಯ ಸಂಕೀರ್ಣದಲ್ಲಿ ಪರಿಶಿಷ್ಟರಿಗೆ ಅಂಗಡಿ ಕೋಣೆ ಬಾಡಿಗೆಗೆ ಕೇಳಿದರೆ ಸಿಗುವುದಿಲ್ಲ. ಆದರೆ ಅದೇ ಕಟ್ಟಡದಲ್ಲಿ ಟೂರಿಸ್ಟ್ ಬಸ್‌ಗಳ ಕಚೇರಿಗಳಿವೆ. ಪರಿಶಿಷ್ಟರಿಗೆ ಮೀಸಲಾದ ಕಟ್ಟಡವನ್ನು ಟೂರಿಸ್ಟ್ ಸಂಸ್ಥೆಯವರಿಗೆ ಯಾಕೆ ನೀಡಲಾಗಿದೆ ಎಂದು ಸುಧಾಕರ್ ಬೋಳೂರು ನಗರದ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ನಡೆದ ಜೂನ್ ತಿಂಗಳ ಎಸ್‌ಸಿ–ಎಸ್‌ಟಿ ಕುಂದುಕೊರತೆ ಸಭೆಯಲ್ಲಿ ಪ್ರಶ್ನಿಸಿದರು. ಹಾಗಿದ್ದರೆ ಇದು ದುರುಪಯೋಗವಲ್ಲವೇ ? ನಿಯಮ ಉಲ್ಲಂಘನೆ ಮಾಡಿದವರ ಪರವಾನಗಿ ರದ್ದು ಮಾಡುವಂತೆ ಮುಖಂಡರು ಆಗ್ರಹಿಸಿದರು. ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿಸಿಪಿ ಸಿದ್ಧಾರ್ಥ




ಗೋಯಲ್ ಉತ್ತರಿಸಿ, ವಿಚಾರವನ್ನು ಸಂಬಂಧ ಪಟ್ಟವರ ಗಮನಕ್ಕೆ ತಂದು ಸೂಕ್ತ ರೀತಿಯಲ್ಲಿ ಬಗೆ ಹರಿಸುವಂತೆ ಸೂಚಿಸಲಾಗುವುದು ಎಂದರು. ದಲಿತ ಮುಖಂಡ ಚಂದ್ರ ಕುಮಾರ್ ಅವರು ಮಾತನಾಡಿ, ದಲಿತರ ಕಾಲನಿಗಳ ಪಕ್ಕದಲ್ಲಿ ತ್ಯಾಜ್ಯ ತಂದು ಸುರಿಯುವ ಪ್ರಕ್ರಿಯೆ ಎಲ್ಲ ಕಡೆಗಳಲ್ಲಿ ಸಾಮಾನ್ಯವಾಗಿದ್ದು, ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ಸುದ್ದಿ ತುಣುಕು

"ಸಿಎಂ ಸಿದ್ದರಾಮಯ್ಯನವರು ಆಡಳಿತದಲ್ಲಿ ಕಂಟ್ರೋಲ್ ಕಳೆದುಕೊಂಡಿಲ್ಲ. ನಮಗೆ ಹೈಕಮಾಂಡ್ ಇದ್ದು, ಎಲ್ಲವನ್ನೂ ನೋಡಿಕೊಳ್ಳುತ್ತದೆ" ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಕಬಿನಿ ಅಣೆಕಟ್ಟೆಯಿಂದ ಹೊರಹರಿವು ಹೆಚ್ಚಳವಾಗಿದ್ದು, ತಗ್ಗು ಪ್ರದೇಶಗಳ ಜನರು ಎಚ್ಚರಿಕೆ ವಹಿಸುವಂತೆ ಸೂಚನೆ ನೀಡಲಾಗಿದೆ.

ಪುತ್ತೂರಿನ ಆನೆಮಜಲು ಪರಿಸರದಲ್ಲಿರುವ ಸಂತ ಅಂತೋಣಿ ಚರ್ಚ್ ಸ್ಮಶಾನದಲ್ಲಿ ಸಮಾಧಿಯೊಂದನ್ನು ತೆರೆದು ಅದರಲ್ಲಿದ್ದ ಮೃತದೇಹವನ್ನು ಕಳವು ಮಾಡಲು ಯತ್ನಿಸಿದ ಘಟನೆಗೆ ವರದಿಯಾಗಿದೆ.

ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಮಳೆ ಅಬ್ಬರ ಮುಂದುವರಿದಿದ್ದು, ಕೊಡಗಿಗೆ ರೆಡ್ ಅಲರ್ಟ್ ಘೋಷಿಸಿದರೆ, ಏಳು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ನೀಡಲಾಗಿದೆ.

ಪೂರ್ಣ ಪ್ರಮಾಣದಲ್ಲಿ ಕನ್ನಡ ಭಾಷೆ ಬಳಸುವಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರು ಕಟ್ಟುನಿಟ್ಟಿನ ಸುತ್ತೋಲೆ ಹೊರಡಿಸಿದ್ದಾರೆ.

ಆಡಿಯೋ ಬಗ್ಗೆ ಸಮಜಾಯಿಸಿ ಕೊಡಲು ಮುಂದಾಗಿದ್ದ ಬಿ.ಆರ್.ಪಾಟೀಲ್ ವಿರುದ್ಧ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

ಅಂಜನಾದ್ರಿಯ ದೇಗುಲದಲ್ಲಿ ಇರಿಸಲಾಗಿದ್ದ ಕಾಣಿಕೆ ಪೆಟ್ಟಿಗೆಗಳನ್ನು ಎಣಿಕೆ ಮಾಡಲಾಗಿದ್ದು, ಥಾಯ್ಲೆಂಡಿನ 20 ಬಾತ್ ಮತ್ತು ಅಮೆರಿಕದ ಒಂದು ಡಾಲರ್ ಕರೆನ್ಸಿ ಪತ್ತೆಯಾಗಿವೆ.

ಮಂಗಳೂರು ನಗರದ ಬಿಜೈನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಬ್ಯೂಟಿ ಸಲೂನ್‌ನಲ್ಲಿ ಅನೈತಿಕ ಚಟುವಟಿಕೆ ನಡೆಯುತ್ತಿದೆ ಎಂಬ ಖಚಿತ ಮಾಹಿತಿಯ ಮೇರೆಗೆ ದಾಳಿ ನಡೆಸಿದ ಪೊಲೀಸರು ಇಬ್ಬರು ಯುವತಿಯರನ್ನು ರಕ್ಷಿಸಿದ್ದಾರೆ.

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಮೇಯರ್, ಉಪ ಮೇಯರ್ ಸ್ಥಾನಗಳಿಗೆ ಜೂನ್ 30 ರಂದು ಚುನಾವಣೆ ನಡೆಯಲಿದೆ.

ಖಾಸಗಿ ಕಂಪನಿಯ ಪೈಪ್‌ಗೆ ರಂಧ್ರ ಕೊರೆದು ಕೋಟ್ಯಂತರ ರೂಪಾಯಿ ಮೌಲ್ಯದ ಪೆಟ್ರೋಲ್ ಕಳ್ಳತನ ಮಾಡಿರುವ ಘಟನೆ ಚಿಕ್ಕಮಗಳೂರಿನ ಹಿರೇಶಿಗರು ಗ್ರಾಮದಲ್ಲಿ ನಡೆದಿದೆ.

ಕಲಾವಿದರ ಮಾಸಾಶನವನ್ನು 2 ಸಾವಿರ ರೂ.ನಿಂದ 2,500 ರೂ.ಗೆ ಹೆಚ್ಚಿಸಿ ರಾಜ್ಯ ಸರ್ಕಾರ ಆದೇಶ ಮಾಡಿದೆ.

ಬೈಕ್ ಟ್ಯಾಕ್ಸಿ ಐಷಾರಾಮಿ ಅಲ್ಲ. ಬದಲಿಗೆ ಇತ್ತೀಚೆಗೆ ಇದು ಅತ್ಯಾವಶ್ಯಕವಾಗಿದೆ. ಇದರಿಂದ ಬೆಂಗಳೂರಿನ ಸಂಚಾರ ದಟ್ಟಣೆ ಕಡಿಮೆ ಮಾಡುವುದಕ್ಕೆ ಸಹಕಾರಿಯಾಗಲಿದೆ ಎಂದು ಬೈಕ್ ಟ್ಯಾಕ್ಸಿ ಕಲ್ಯಾಣ ಸಂಘ ಹೈಕೋರ್ಟ್‌ಗೆ ತಿಳಿಸಿದೆ.

ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ ಕಟ್ಟಡ ನಕ್ಷೆ ಅನುಮೋದನೆ ಇಲ್ಲದಿದ್ದರೆ ನೀರು, ವಿದ್ಯುತ್ ಸಂಪರ್ಕ ನೀಡುವಂತಿಲ್ಲ ಎಂದು ಡಿ ಕೆ ಶಿವಕುಮಾರ್ ತಿಳಿಸಿದರು.

ಕಾವೇರಿ ಆರತಿ ಕಾರ್ಯಕ್ರಮದ ಬಗ್ಗೆ ತಪ್ಪು ಗ್ರಹಿಕೆಯಿಂದ ಕೆಲವರು ಅಪಸ್ವರ ಎತ್ತುತ್ತಿದ್ದಾರೆ. ಇದರಿಂದ ಕೆಆರ್‌ಎಸ್ ಅಣೆಕಟ್ಟೆಗೆ ಯಾವುದೇ ತೊಂದರೆ ಇಲ್ಲ ಎಂದು ಡಿಸಿಎಂ ಡಿ. ಕೆ. ಶಿವಕುಮಾರ್ ತಿಳಿಸಿದರು.

ಜೆಜೆಎಂ ಯೋಜನೆಯಡಿ ಹಳ್ಳಿಗಳಿಗೆ ನೀರು ಕೊಡುವ ಸಲುವಾಗಿ ಭದ್ರಾ ಬಲದಂಡೆ ಕಾಲುವೆಯನ್ನು ಒಡೆದಿದ್ದಾರೆ ಎಂದು ಸರ್ಕಾರದ ವಿರುದ್ಧ ದಾವಣಗೆರೆ ರೈತರು ಆಕ್ರೋಶ ಹೊರಹಾಕಿದ್ದಾರೆ.

ಸೈಬರ್ ವಂಚನೆ ವಿರುದ್ಧ ಕಾರ್ಯಾಚರಣೆ ಕೈಗೊಂಡ ಸೈಬರಾಬಾದ್ ಸೈಬರ್ ಕ್ರೈಮ್ ಪೊಲೀಸರು, ನಾಲ್ವರು ಸಾಮಾಜಿಕ ಮಾಧ್ಯಮ ಪ್ರಭಾವಿಗಳನ್ನು ಬಂಧಿಸಿದ್ದಾರೆ.

ಹಿಂದಿಯು ಭಾಷೆಯು ಎಂದಿಗೂ ಭಾರತೀಯ ಭಾಷೆಗಳಿಗೆ ವಿರೋಧಿಯಾಗಲು ಸಾಧ್ಯವಿಲ್ಲ. ಬದಲಾಗಿ ಇದು ಎಲ್ಲಾ ಭಾರತೀಯ ಭಾಷೆಗಳಿಗೆ ಸ್ನೇಹಿಯಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದರು.

# ಕಾಶಿ ಹಲ್ವಾ




**ಬೇಕಾಗುವ ಪದಾರ್ಥಗಳು :**

ಬೂದುಕುಂಬಳ ಕಾಯಿ ತುರಿ – 3ಕಪ್
ಸಕ್ಕರೆ – 1 ಕಪ್
ಕೇಸರಿ – 3 ಚಮಚ
ತುಪ್ಪ – 1 ಕಪ್
ಗೋಡಂಬಿ – 10 –12
ಏಲಕ್ಕಿ ಪುಡಿ – ಚಿಟಿಕಿ

**ಮಾಡುವ ವಿಧಾನ :**

ಮೊದಲಿಗೆ ತುರಿದ ಕುಂಬಳಕಾಯಿಯನ್ನು ಕಡಾಯಿಗೆ ಹಾಕಿ ಕುಂಬಳಕಾಯಿ ಸಂಪೂರ್ಣವಾಗಿ ನೀರು ಹೀರಿಕೊಳ್ಳುವವರೆಗೆ ಬೇಯಿಸಿ ಅದಕ್ಕೆ 1 ಕಪ್ ಸಕ್ಕರೆ ಮತ್ತು ಕೇಸರಿಯನ್ನು ಹಾಕಿಕೊಂಡು, ಸಕ್ಕರೆ ಸಂಪೂರ್ಣವಾಗಿ ಕರಗುವ ತನಕ ಚೆನ್ನಾಗಿ ಮಿಶ್ರಣ ಮಾಡಿ. ಸಕ್ಕರೆ ಪಾಕವು ದಪ್ಪವಾಗುವವರೆಗೆ 5ನಿಮಿಷ ಅಥವಾ ಅದಕ್ಕಿಂತ ಹೆಚ್ಚು ಕಾಲ ಕುದಿಸಿ. ನಂತರ, 1 ಕಪ್ ತುಪ್ಪ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಗೋಡಂಬಿಯನ್ನು ಒಂದು ಟೀಸ್ಪೂನ್ ತುಪ್ಪದೊಂದಿಗೆ ಕಂದು ಬಣ್ಣ ಬರುವವರೆಗೆ ಹುರಿದು ಜೊತೆಗೆ ಏಲಕ್ಕಿ ಪುಡಿಯನ್ನು ಹಾಕಿ ಚೆನ್ನಾಗಿ ಮಿಶ್ರಣ ಮಾಡಿಕೊಂಡರೆ ರುಚಿಕರವಾದ ಕಾಶಿ ಹಲ್ವಾ ಸವಿಯಲು ಸಿದ್ಧ.

# ನೋಬೆಲ್ ಶಾಂತಿ ಪ್ರಶಸ್ತಿಗೆ ಟ್ರಂಪ್ ಹೆಸರು : ಮರು ಪರಿಶೀಲನೆಗೆ ಒತ್ತಾಯ



ಪಾಕಿಸ್ತಾನ : 2026ರ ನೋಬೆಲ್ ಶಾಂತಿ ಪುರಸ್ಕಾರಕ್ಕೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ನಾಮ ನಿರ್ದೇಶನಕ್ಕೆ ಶಿಫಾರಸ್ಸು ಮಾಡಿದ ನಿರ್ಧಾರವನ್ನು ಪುನರ್ ಪರಿಶೀಲಿಸುವಂತೆ ಅನೇಕ ಪಾಕಿಸ್ತಾನ ರಾಜಕೀಯ ನಾಯಕರು ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ಇರಾನ್‌ನ ಮೂರು ಪರಮಾಣು ಸೌಲಭ್ಯ ಘಟಕಗಳನ್ನು ಗುರಿಯಾಗಿಸಿಕೊಂಡು ಅಮೆರಿಕ ದಾಳಿ ನಡೆಸಿದ ಬೆನ್ನಲ್ಲೇ ಈ ಕುರಿತು ಒತ್ತಾಯಿಸಲಾಗಿದೆ. ಈ ಬೆಳವಣಿಗೆ ಒಂದೆರಡು ದಿನಗಳ ಹಿಂದೆ ಪಾಕಿಸ್ತಾನ ಮತ್ತು ಭಾರತ ಸಂಘರ್ಷ ಸಮಯದಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡೆಸಿದ ಶಾಂತಿ ಪ್ರಯತ್ನಕ್ಕೆ ಅವರಿಗೆ ಅತ್ಯುನ್ನತ ನೊಬೆಲ್ ಪ್ರಶಸ್ತಿಗೆ ಹೆಸರನ್ನು ನಿರ್ದೇಶಿಸಿ ಪಾಕಿಸ್ತಾನ ಶಿಫಾರಸು ಮಾಡಿತ್ತು.

# ವಿಕಿರಣ ಸೋರಿಕೆಯಾಗಿಲ್ಲವೆಂದು ಸ್ಪಷ್ಟನೆ

ವಾಷಿಂಗ್ಟನ್ : ಇರಾನ್‌ನ ಮೂರು ಪರಮಾಣು ಸ್ಥಾವರಗಳ ಮೇಲೆ ಅಮೆರಿಕ ಬಾಂಬ್ ದಾಳಿ ನಡೆಸಿದ ನಂತರ ಅಲ್ಲಿ ವಿಕಿರಣ ಹೊರಸೂಸಿಲ್ಲ ಎಂದು ಅಂತಾರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆ (IAEA) ದೃಢಪಡಿಸಿದೆ. ಅಣ್ವಸ್ತ್ರ ಬಾಂಬ್ ತಯಾರಿಸಲು ಇರಾನ್ ಯುರೇನಿಯಂ ಶೇಖರಣೆ ಮಾಡಿಟ್ಟಿದ್ದ ಘಟಕಗಳ ಮೇಲೆ ಅಮೆರಿಕ ಬಿ–2 ಬಾಂಬರ್, ಬಂಕರ್ ಬಸ್ಟರ್ ಬಾಂಬ್‌ಗಳಿಂದ ಅವುಗಳನ್ನು ನಾಶ ಮಾಡಿದೆ. ಇದರಿಂದ ವಿಕಿರಣ ಹೊರಸೂಸುವ ಭೀತಿ ಉಂಟಾಗಿತ್ತು. ಇದಕ್ಕೆ ಸ್ಪಷ್ಟನೆ ನೀಡಿರುವ



ಐಎಇಎ, ಇರಾನ್‌ನ ಪರಮಾಣು ತಾಣಗಳ ಮೇಲೆ ಇತ್ತೀಚೆಗೆ ನಡೆದ ದಾಳಿಗಳಿಂದ ಆ ಪ್ರದೇಶದಲ್ಲಿ ವಿಕಿರಣಗಳು ಹೊರಬಂದಿಲ್ಲ ಎಂದು ಹೇಳಿದೆ.

# 'ಆಪರೇಷನ್ ಸಿಂಧೂ' ಕಾರ್ಯಾಚರಣೆ ಮೂಲಕ ಭಾರತೀಯರು ತಾಯ್ನಾಡಿಗೆ



ನವದೆಹಲಿ : ಇಸ್ರೇಲ್ ಮತ್ತು ಇರಾನ್ ನಡುವೆ ಉದ್ವಿಗ್ನತೆ ಏರ್ಪಟ್ಟಿರುವ ಬೆನ್ನಲ್ಲೇ ಅಲ್ಲಿ ಸಂಕಷ್ಟಕ್ಕೆ ಸಿಲುಕಿರುವ ಭಾರತೀಯರನ್ನು ಕರೆತರುವ ಪ್ರಯತ್ನ ಸಾಂಗವಾಗಿ ಸಾಗಿದೆ. ಇದೀಗ ಈ ನಿಟ್ಟಿನಲ್ಲಿ ಇರಾನ್ ತನ್ನ ವಾಯುಪ್ರದೇಶವನ್ನು ಭಾರತಕ್ಕೆ ಮಾತ್ರ ತೆರೆದಿದೆ. ಇರಾನ್‌ನಲ್ಲಿ 10,000 ಭಾರತೀಯರಿದ್ದಾರೆ ಎಂದು ಅಂದಾಜಿಸಲಾಗಿದೆ. ಈ ಪೈಕಿ 1,500 ರಿಂದ 2,000 ವಿದ್ಯಾರ್ಥಿಗಳು, ಇನ್ನೂ 6,000 ಜನರು ಅಲ್ಲಿ ಕೆಲಸ ಮಾಡುತ್ತಿದ್ದಾರೆ. ಅವರೊಂದಿಗೆ, ಅಲ್ಲಿನ ಹಡಗು ಕಂಪನಿಗಳಲ್ಲಿ ಕೆಲಸ ಮಾಡುವ ಅನೇಕ ನಾವಿಕರು ಸಹ ಇದ್ದಾರೆ. ಭದ್ರತಾ ಕಾರಣಗಳಿಂದಾಗಿ ಇರಾನ್ ಅವರನ್ನು ತನ್ನ ದೇಶವನ್ನು ದಾಟಲು ಅನುಮತಿಸಿರಲಿಲ್ಲ. ಭಾರತದ ಏರ್ ಚಾರ್ಟಡ್ ವಿಮಾನಗಳು ಆಪರೇಷನ್ ಸಿಂಧೂ ಕಾರ್ಯಾಚರಣೆ ಮೂಲಕ ಭಾರತೀಯರನ್ನು ಕರೆ ತರಲಾಗಿದೆ.

# ಅಭಿನಂದನ್ ಸೆರೆಹಿಡಿದಿದ್ದ ಪಾಕಿಸ್ತಾನ ಸೇನಾಧಿಕಾರಿ ಹತ್ಯೆ

ಪಾಕಿಸ್ತಾನ : 2019ರ ಬಾಲಾಕೋಟ್ ವೈಮಾನಿಕ ದಾಳಿಯ ಸಮಯದಲ್ಲಿ ಭಾರತದ ವಿಂಗ್ ಕಮಾಂಡರ್ ಅಭಿನಂದನ್ ವರ್ಧಮಾನ್ ಅವರನ್ನು ಸೆರೆಹಿಡಿದಿದ್ದೇನೆ ಎಂದು ಹೇಳಿಕೊಂಡಿದ್ದ ಪಾಕಿಸ್ತಾನದ ವಿಶೇಷ ಪಡೆಗಳ ಅಧಿಕಾರಿ ತಾಲಿಬಾನ್ ಉಗ್ರರೊಂದಿಗಿನ ಘರ್ಷಣೆಯಲ್ಲಿ ಹತನಾಗಿದ್ದಾರೆ. ಅಫ್ಘಾನ್ ಗಡಿ ಬಳಿಯ ದಕ್ಷಿಣ ವಜೀರಿಸ್ತಾನದ ಸಾರೋಘಾ ಪ್ರದೇಶದಲ್ಲಿ ತಾಲಿಬಾನ್ ಉಗ್ರ ಸಂಘಟನೆಯಾದ ತೆಹ್ರೀಕ್–ಇ–ತಾಲಿಬಾನ್ ಪಾಕಿಸ್ತಾನ್ (ಟಿಟಿಪಿ) ಜೊತೆಗಿನ ಘರ್ಷಣೆಯಲ್ಲಿ ಮೇಜರ್ ಸೈಯದ್ ಮೊಯಿಜ್ ಅಬ್ಬಾಸ್ ಶಾ (37)



ಸಾವನ್ನಪ್ಪಿದ್ದಾರೆ ಎಂದು ಪಾಕಿಸ್ತಾನ ಸೇನೆ ತಿಳಿಸಿದೆ. ಅಬ್ಬಾಸ್ ಶಾ ಸಾವಿಗೆ ಪಾಕಿಸ್ತಾನಿ ತಾಲಿಬಾನ್ ಎಂದು ಕರೆಯಲ್ಪಡುವ ಟಿಟಿಪಿ ಹೊಣೆ ಹೊತ್ತಿದೆ.

# ಗಾಜಾದಲ್ಲಿ ಶಸ್ತ್ರಸಜ್ಜಿತ ವಾಹನ ಸ್ಫೋಟ: ಇಸ್ರೇಲ್ ಯೋಧರ ಸಾವು



ಜೇರುಸಲೆಂ: ದಕ್ಷಿಣ ಗಾಜಾ ನಗರದ ಖಾನ್ ಯೂನಿಸ್‌ನಲ್ಲಿ ಇಸ್ರೇಲ್‌ನ ಶಸ್ತ್ರಸಜ್ಜಿತ ವಾಹನದ ಸ್ಫೋಟದಿಂದ 7 ಮಂದಿ ಇಸ್ರೇಲ್ ಯೋಧರು ಸಾವನ್ನಪ್ಪಿದ್ದು, ಓರ್ವ ಯೋಧ ಗಂಭೀರವಾಗಿ ಗಾಯಗೊಂಡಿದ್ದಾನೆ ಎಂದು ಇಸ್ರೇಲಿ ಮಿಲಿಟರಿ ಅಧಿಕಾರಿ ತಿಳಿಸಿದ್ದಾರೆ. ಇಸ್ರೇಲ್ ಮಿಲಿಟರಿ ಮೇಲೆ ಗಾಜಾದೊಳಗೆ ನಡೆದ ಭೀಕರ ದಾಳಿ ಇದಾಗಿದೆ. ಹಮಾಸ್ ಮತ್ತು ಇಸ್ರೇಲ್ ನಡುವಿನ ಯುದ್ಧ ಆರಂಭವಾದಾಗಿನಿಂದ 860 ಇಸ್ರೇಲಿ ಯೋಧರು ಇಲ್ಲಿಯವರೆಗೆ ಹಮಾಸ್ ದಾಳಿಗೆ ಬಲಿಯಾಗಿದ್ದಾರೆ. ಇದರಲ್ಲಿ 400 ಮಂದಿ ಗಾಜಾದಲ್ಲಿ ಸಾವನ್ನಪ್ಪಿದ್ದಾರೆ.


# ಕಾರುಗಳಿದ್ದ ಸರಕು ಸಾಗಣೆ ಹಡಗು ಮುಳುಗಡೆ

ಅಲಾಸ್ಕಾ : ಸರಕು ಸಾಗಣೆಯ ಮತ್ತೊಂದು ಹಡಗು ಸಮುದ್ರದ ಪಾಲಾಗಿದೆ. ಸುಮಾರು 3 ಸಾವಿರ ಎಲೆಕ್ಟ್ರಿಕ್ ಮತ್ತು ಸಾಮಾನ್ಯ ಕಾರುಗಳನ್ನು ಹೊತ್ತೊಯ್ಯುತ್ತಿದ್ದ ಮಾರ್ನಿಂಗ್ ಮಿಡಾಸ್ ಎಂಬ ಹಡಗು ಉತ್ತರ ಪೆಸಿಫಿಕ್ ಮಹಾಸಾಗರದಲ್ಲಿ ಮುಳುಗಿದೆ. ಲಂಡನ್‌ನ ಜೋಡಿಯಾಕ್ ವ್ಯಾರಿಟೈಮ್ ಎಂಬ ಕಂಪನಿಗೆ ಸೇರಿದ ಈ ಹಡಗು, ಹೊಸ ಕಾರುಗಳನ್ನು ಅಲಾಸ್ಕಾದ ಅಡಕ್ ದ್ವೀಪದಿಂದ ಹೊತ್ತು ಮೆಕ್ಸಿಕೋದ ಬಂದರಿಗೆ ಸಾಗುತ್ತಿತ್ತು.



ಭೂಪ್ರದೇಶದಿಂದ 300 ಮೈಲುಗಳು (490 ಕಿ.ಮೀ) ದೂರದಲ್ಲಿ ಸಾಗುತ್ತಿದ್ದಾಗ ಹಡಗಿನಲ್ಲಿ ಬೆಂಕಿ ಕಾಣಿಸಿಕೊಂಡಿತ್ತು.

# ಭಾರತ ಮತ್ತು ಪಾಕಿಸ್ತಾನ ಮುಖಾಮುಖಿ ಆಗಲು ಸಜ್ಜು




ಮುಂದಿನ ತಿಂಗಳು ಭಾರತ ಮತ್ತು ಪಾಕಿಸ್ತಾನ ತಂಡಗಳು ಕ್ರಿಕೆಟ್‌ನಲ್ಲಿ ಮುಖಾಮುಖಿ ಆಗಲು ಸಜ್ಜಾಗಿವೆ. ಭಾರತ ತನ್ನ ಮೊದಲ ಪಂದ್ಯದಲ್ಲಿ ಪಾಕ್ ತಂಡದ ವಿರುದ್ಧ ಸೆಣಸಲಿದ್ದು, ನಂತರ ದಕ್ಷಿಣ ಆಫ್ರಿಕಾ, ಆಸ್ಟ್ರೇಲಿಯಾ, ಇಂಗ್ಲೆಂಡ್ ಮತ್ತು ವೆಸ್ಟ್ ಇಂಡೀಸ್ ತಂಡಗಳ ವಿರುದ್ಧ ಸೆಣಸಲಿದೆ. ಭಾರತ, ಪಾಕಿಸ್ತಾನ ಮೊದಲ ಪಂದ್ಯ ಜುಲೈ 22ಕ್ಕೆ ಇಂಗ್ಲೆಂಡ್‌ನ ನಾರ್ಥಾಂಪ್ಟನ್ ಮೈದಾನದಲ್ಲಿ ನಡೆಯಲಿದೆ. ಎರಡನೇ ಪಂದ್ಯ ದಕ್ಷಿಣ ಆಫ್ರಿಕಾ ವಿರುದ್ಧ, ಮೂರನೇ ಪಂದ್ಯದಲ್ಲಿ ಆಸ್ಟ್ರೇಲಿಯಾ, ನಾಲ್ಕನೇ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಸೆಣಸಲಿದೆ.

# 148 ವರ್ಷಗಳ ಇತಿಹಾಸದಲ್ಲೇ ಭಾರತ ಕೆಟ್ಟ ದಾಖಲೆ

ಇಂಗ್ಲೆಂಡ್ : ಐದು ಶತಕಗಳು ಸಿಡಿಸಿದ ಬಳಿಕವೂ ಟೆಸ್ಟ್‌ನಲ್ಲಿ ಸೋಲನ್ನು ಕಂಡ ಮೊದಲ ತಂಡವಾಗಿ ಭಾರತ ಕೆಟ್ಟ ದಾಖಲೆ ಬರೆದಿದೆ. ಈ ಹಿಂದೆ 1928ರಲ್ಲಿ ಆಸ್ಟ್ರೇಲಿಯಾ ತಂಡ ಟೆಸ್ಟ್‌ವೊಂದರಲ್ಲಿ 4 ಶತಕ ಸಿಡಿಸಿ ಸೋಲನ್ನು ಕಂಡಿತ್ತು. ಇದೀಗ ಭಾರತ ಈಕೆಟ್ಟ ದಾಖಲೆಯನ್ನು ತನ್ನ ಹೆಸರಿಗೆ ಸೇರಿಸಿಕೊಂಡಿದೆ. 148 ವರ್ಷಗಳ ಕ್ರಿಕೆಟ್ ಇತಿಹಾಸದಲ್ಲಿ ಇದೇ




ಮೊದಲ ಬಾರಿಗೆ ಐದು ಶತಕ ಸಿಡಿಸಿ ಸೋಲನ್ನು ಕಂಡ ತಂಡವಾಗಿ ಕೆಟ್ಟ ದಾಖಲೆ ಬರೆದಿದೆ.

# ಕೆಆರ್‌ಎಸ್ ಜಲಾಶಯವು ಭರ್ತಿಯಾಗುವ ಹಂತಕ್ಕೆ !



ಮಂಡ್ಯ: ಜಿಲ್ಲೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೆಆರ್‌ಎಸ್ ಜಲಾಶಯವು ಭರ್ತಿಯಾಗುವ ಹಂತಕ್ಕೆ ತಲುಪಿದೆ. ಹೀಗಾಗಿ, ಡ್ಯಾಂನಿಂದ ಯಾವುದೇ ಸಮಯದಲ್ಲಿ ಹೆಚ್ಚಿನ ನೀರು ಬಿಡುಗಡೆಯಾಗುವ ಸಾಧ್ಯತೆಯಿದ್ದು, ನದಿ ಪಾತ್ರದ ಜನರು ಎಚ್ಚರಿಕೆ ವಹಿಸುವಂತೆ ಸೂಚನೆ ನೀಡಲಾಗಿದೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ಭಾರಿ ಮಳೆಯಾಗುತ್ತಿದ್ದು, ಕೆಆರ್‌ಎಸ್ ಜಲಾಶಯದ ಒಳ ಹರಿವಿನ ಪ್ರಮಾಣವೂ ಹೆಚ್ಚಾಗಿದೆ. ಈ ಪ್ರಮಾಣವು 30,000 ಕ್ಯೂಸೆಕ್‌ಗೆ ಹೆಚ್ಚಾಗಬಹುದು. ಇದರಿಂದ ಕಾವೇರಿ ನದಿ ಪಾತ್ರದ ತಗ್ಗು ಪ್ರದೇಶಗಳು ಮತ್ತು ನದಿಯ ಎರಡೂ ದಂಡೆಗಳಲ್ಲಿರುವ ಜನರು ಎಚ್ಚರ ವಹಿಸಬೇಕು.

# ಕರ್ನಾಟಕ ವಿದ್ಯುತ್ ಕಾಯಿದೆ ತಿದ್ದುಪಡಿ ಅಸಿಂಧು ಎಂದ ಹೈಕೋರ್ಟ್

ಬೆಂಗಳೂರು: ವಿದ್ಯುತ್ ಪೂರೈಕೆ ಮೇಲೆ ತೆರಿಗೆ ವಿಧಿಸುವ ಕರ್ನಾಟಕ ವಿದ್ಯುತ್ ಕಾಯಿದೆ 1959ರ ಸೆಕ್ಷನ್ 3(1)ಕ್ಕೆ ತಿದ್ದಪಡಿ ಮಾಡಿದ್ದ ರಾಜ್ಯಸರ್ಕಾರದ ಕ್ರಮ ಅಸಾಂವಿಧಾನಿಕ ಎಂದು ಹೈಕೋರ್ಟ್ ಘೋಷಿಸಿದೆ. ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ ಹಾಗೂ ಮೆಸಸ್ ಸೋನಾ ಸಿಂಥೆಟೆಕ್ ಕಂಪನಿಗಳು ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾ.ಮೂ. ಅನಂತ್ ರಾಮನಾಥ ಹೆಗಡೆ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ. ಅಲ್ಲದೆ, ಸಂವಿಧಾನ 7ನೇ ಷೆಡ್ಯೂಲ್ಡ್ ನಲ್ಲಿರುವ ವಿದ್ಯುತ್ ಮೇಲೆ ರಾಜ್ಯಸರ್ಕಾರ ಬಳಕೆ ಮತ್ತು ಮಾರಾಟದ ಮೇಲೆ ತೆರಿಗೆ ವಿಧಿಸುವ ಅಧಿಕಾರ ಸೀಮಿತವಾಗಿದೆ ಎಂದು ಸ್ಪಷ್ಟಪಡಿಸಿದೆ.




# ಇ. ಡಿ ತನಿಖೆ ಎದುರಿಸಲು ಸಿದ್ಧ : ಡಿ.ಕೆ.ಶಿವಕುಮಾರ್

ಬೆಂಗಳೂರು : ನಮ್ಮ ಕುಟುಂಬ ಯಾವತ್ತೂ ಇ. ಡಿ. ತನಿಖೆ ಎದುರಿಸಲು ಸಿದ್ಧ. ನನ್ನ ಮೇಲೆ ಕೇಸ್ ಆದಾಗ ಯಾರೂ ರಕ್ಷಣೆಗೆ ಬಂದಿರಲಿಲ್ಲ ಎಂದು ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ತಿಳಿಸಿದರು. ಈಗ ಯಾರೋ ಹೇಳಿಕೆ ನೀಡಿದ್ದಾರೆ ಅಂತ ಡಿ. ಕೆ. ಸುರೇಶ್‌ರನ್ನು ಕರೆದಿದ್ದಾರೆ. ಜನಪ್ರತಿನಿಧಿಗಳನ್ನು ಅವರ ಕ್ಷೇತ್ರದಲ್ಲಿ ಅನೇಕರು ಭೇಟಿ ಮಾಡುತ್ತಾರೆ. ಇ. ಡಿ. ಏನೆಲ್ಲ ಪ್ರಶ್ನೆ ಕೇಳುತ್ತಾರೆ ಅದಕ್ಕೆ ಉತ್ತರ ಕೊಡುತ್ತಾರೆ. ತನಿಖೆಗೆ ಸಹಕಾರ ನೀಡಲು ಸಿದ್ಧರಿದ್ದಾರೆ. ನೀವು ಅದನ್ನು ದೊಡ್ಡದಾಗಿ ಬಿಂಬಿಸುತ್ತಿದ್ದೀರಿ. ಯಾವುದನ್ನು ಬಿಂಬಿಸಬೇಕೋ ಅದನ್ನು ಬಿಂಬಿಸಲ್ಲ ಎಂದು ಬೇಸರ ವ್ಯಕ್ತಪಡಿಸಿದರು.



# ರಾಜ್ಯ ಸರಕಾರ ಭ್ರಷ್ಟ ಎಂದು ಬಿ. ಆರ್ ಪಾಟೀಲ್ ಹೇಳಿಕೆಯಿಂದ ಗೊತ್ತಾಗುತಿದೆ

ಬೆಂಗಳೂರು : ರಾಜ್ಯ ಸರ್ಕಾರವೇ ಭ್ರಷ್ಟಾಚಾರಕ್ಕೆ ಉತ್ತೇಜನ ನೀಡುತ್ತಿದೆ. ಈ ಎಲ್ಲವೂ ಬಿ. ಆರ್ ಪಾಟೀಲ್ ಹೇಳಿಕೆಯಿಂದ ಗೊತ್ತಾಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಅವರು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರಾದ ಬಿ.ಆರ್.ಪಾಟೀಲ್ ಗಂಭೀರವಾದ ರಾಜ್ಯದ ಪರಿಸ್ಥಿತಿಯ ಬಗ್ಗೆ



ಬೆಳಕು ಚೆಲ್ಲಿದ್ದಾರೆ. ಯಾವ ಇಲಾಖೆ ಬಡವರಿಗೆ ಮನೆಗಳನ್ನು ಕೊಡಬೇಕಿತ್ತೋ, ಅಲ್ಲಿಯೂ ಸಹ ಭ್ರಷ್ಟಾಚಾರ ನಡೆಯುತ್ತಿದೆ ಎಂಬುದನ್ನು ಇಂದು ರಾಜ್ಯದ ಜನತೆ ಮುಂದೆ ಬಿಚ್ಚಿಟ್ಟಿದ್ದಾರೆ ಎಂದು ಹೇಳಿದ್ದಾರೆ. ಕಾಂಗ್ರೆಸ್ ಸರ್ಕಾರ, ಸಿದ್ದರಾಮಯ್ಯ ಸರ್ಕಾರದಿಂದ ಬಡವರಿಗೆ ಯಾವುದೇ ಅನುಕೂಲ ಇಲ್ಲ ಎಂದು ತಿಳಿಸಿದ್ದಾರೆ.


# ರಾಜ್ಯದಲ್ಲಿ ಪೊಲೀಸ್ ಇಲಾಖೆಗೆ ಆದ್ಯತೆಯ ಮೇರೆಗೆ ಭರ್ತಿ



ಕೊಪ್ಪಳ: ಪಿಎಸ್‌ಐ ನೇಮಕಾತಿ ಹಗರಣದ ಬಳಿಕ ಐದು ವರ್ಷಗಳ ಕಾಲ ಯಾವುದೇ ಪೊಲೀಸ್ ನೇಮಕಾತಿ ಆಗಿಲ್ಲ. ಒಂದು ಸಾವಿರ ಪಿಎಸ್‌ಐ ಹುದ್ದೆಗಳು ಖಾಲಿ ಇವೆ. ನಮ್ಮ ಸರ್ಕಾರದಿಂದ ಶೀಘ್ರವಾಗಿ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸುವುದಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು. ಈಗಾಗಲೇ 500 ಪಿಸ್‌ಐ ಹುದ್ದೆಗಳಿಗೆ ನೇಮಕಾತಿ ನಡೆದಿದ್ದು, ಅವರೆಲ್ಲ ತರಬೇತಿ ಪಡೆಯುತ್ತಿದ್ದಾರೆ. ರಾಜ್ಯದಲ್ಲಿ ಎಂಟು ಸಾವಿರ ಕಾನ್‌ಸ್ಟೇಬಲ್ ಹುದ್ದೆಗಳು ಖಾಲಿ ಇವೆ. ಭರ್ತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು. ಹೆಚ್ಚುವರಿ ಟ್ರಾಫಿಕ್ ಪೊಲೀಸ್ ಸ್ಟೇಷನ್ ಸೇರಿದಂತೆ ಇನ್ನಿತರ ಕಾರ್ಯಚಟುವಟಿಕೆಗಳಿಗೆ ಮುಂದಿನ ಬಜೆಟ್‌ನಲ್ಲಿ ಅನುದಾನ ಮೀಸಲಿಡಲಾಗುವುದು ಎಂದರು.

# ವಾಹನ ಸಂಚಾರಕ್ಕೆ ಪ್ರಮಾಣಪತ್ರ ಕೊಡಲು ಹೈ ಕೋರ್ಟ್ ಆದೇಶ

ಬೆಂಗಳೂರು: ರಾಜಧಾನಿ ಬೆಂಗಳೂರು ನಗರದಲ್ಲಿ ಪ್ರತಿ ವರ್ಷ ಎದುರಾಗುವ ರಸ್ತೆ ಗುಂಡಿಗಳ ಸಮಸ್ಯೆಯನ್ನು ಪರಿಹರಿಸುವುದು ಮತ್ತು ಸುಗಮ ಪಾದಚಾರಿ ಮಾರ್ಗ ಹಾಗೂ ವಾಹನ ಸಂಚಾರಕ್ಕೆ ಸೌಲಭ್ಯ ಒದಗಿಸುವುದಕ್ಕೆ ಸಂಬಂಧಿಸಿದಂತೆ ಅಳವಡಿಸಿಕೊಂಡಿರುವ ಕಾರ್ಯವಿಧಾನದ ಕುರಿತು ಸವಿವರವಾದ



ಪ್ರಮಾಣಪತ್ರ ಸಲ್ಲಿಸುವಂತೆ ಬೆಂಗಳೂರು ಮಹಾನಗರ ಪಾಲಿಕೆ(ಬಿಬಿಎಂಪಿ)ಗೆ ಹೈಕೋರ್ಟ್ ಸೂಚಿಸಿದೆ. ರಸ್ತೆ ಗುಂಡಿಗಳನ್ನು ಮುಚ್ಚುವುದು ಮತ್ತು ರಾಜಕಾಲುವೆ ಒತ್ತುವರಿ ತೆರವಿಗೆ ನಿರ್ದೇಶನ ಕೋರಿ ವಿಜಯ್ ಮೆನನ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ನ್ಯಾಯಪೀಠ ಈ ಸೂಚನೆ ನೀಡಿದೆ.

# ತುರ್ತು ಪರಿಸ್ಥಿತಿ ಹೇರಿಕೆ ಭಾರತ ಪ್ರಜಾಪ್ರಭುತ್ವ ಇತಿಹಾಸದ ಕರಾಳ ದಿನ

ನವದೆಹಲಿ: ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಸಂವಿಧಾನದ ಆಶಯಗಳ ಉಲ್ಲಂಘನೆಯನ್ನು ಯಾವುದೇ ಭಾರತೀಯನೂ ಮರೆಯಲಾರ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಇದೇ ವೇಳೆ ನಮ್ಮ ಸರ್ಕಾರ ಸಂವಿಧಾನದ ತತ್ವಗಳನ್ನು ಬಲಗೊಳಿಸಲು ಬದ್ಧ ಎಂದು ಭರವಸೆ ನೀಡಿದ್ದಾರೆ. ತುರ್ತು ಪರಿಸ್ಥಿತಿಯ 50ನೇ ವರ್ಷಾಚರಣೆಯ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸರಣಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಇದೊಂದು ಕರಾಳ ಅಧ್ಯಾಯ, ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಸಂವಿಧಾನದ ಮೌಲ್ಯಗಳನ್ನು ಬದಿಗಿಡಲಾಯಿತು ಎಂದರು.



# ರಾಹುಲ್ ಗಾಂಧಿ ಆರೋಪಕ್ಕೆ ಫಡ್ನವೀಸ್ ತಿರುಗೇಟು..!

ನವದೆಹಲಿ: ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ವಿರುದ್ಧ ಅವರ ಕ್ಷೇತ್ರದಲ್ಲಿ ಮತ ಕಳ್ಳತನ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಸಿಎಂ ಫಡ್ನವೀಸ್ ಕ್ಷೇತ್ರದಲ್ಲಿ ಕೇವಲ 5ತಿಂಗಳಲ್ಲಿ ಶೇ.8ರಷ್ಟು ಮತದಾರರು ಹೆಚ್ಚಾಗಿದ್ದು ಹೇಗೆ ಇದು "ಮತ



ಕಳ್ಳತನ" ಅಲ್ಲವೇ ಎಂದು ಪ್ರಶ್ನಿಸಿದ್ದಾರೆ. ರಾಹುಲ್‌ಗಾಂಧಿ ಆರೋಪಕ್ಕೆ ಸಿಎಂ ದೇವೇಂದ್ರ ಫಡ್ನವೀಸ್ ತಿರುಗೇಟು ನೀಡಿದ್ದಾರೆ. ರಾಹುಲ್ ಗಾಂಧಿಗೆ ಮಹಾರಾ ಷ್ಟದಲ್ಲಿನ ಅವಮಾನಕರ ಸೋಲಿನಿಂದ ನಿಮ್ಮ ದುಃಖ ದಿನೇ ದಿನೇ ಹೆಚ್ಚುತ್ತಿದೆ ಎಂದು ನನಗೆ ಅರ್ಥವಾಗುತ್ತಿದೆ ಎನ್ನುವಂತೆ ಫಡ್ನವೀಸ್ ಲೇವಡಿ ಮಾಡಿದ್ದಾರೆ.


# ಉತ್ತರಾಖಂಡ್‌ನಲ್ಲಿ ಮುಂಗಾರು ಆರ್ಭಟ : ರಸ್ತೆ ಬಂದ್



ಡೆಹ್ರಾಡೂನ್: ಉತ್ತರಾಖಂಡ್‌ನಲ್ಲಿ ಸುರಿಯುತ್ತಿರುವ ಮಳೆಯು ಅನೇಕ ಅನಾಹುತಗಳಿಗೆ ಕಾರಣವಾಗಿದೆ. ವಿಶೇಷವಾಗಿ ಗುಡ್ಡಗಾಡು ಪ್ರದೇಶದಲ್ಲಿ ಸುರಿಯುತ್ತಿರುವ ಮಳೆಯಿಂದ ಹೆದ್ದಾರಿ, ಗಡಿ ರಸ್ತೆಗಳು ಸೇರಿದಂತೆ 24 ರಸ್ತೆಗಳ ಸಂಚಾರ ಬಂದ್ ಆಗಿದ್ದು, ಪ್ರಯಾಣಿಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಾನ್ಸೂನ್‌ನ ಆರಂಭಿಕ ಮಳೆ ನಿರಂತರವಾಗಿ ಸುರಿಯುತ್ತಿರುವ ಪರಿಣಾಮ ಗುಡ್ಡ ಕುಸಿತ, ಅನೇಕ ನೈಸರ್ಗಿಕ ವಿಪತ್ತುಗಳು ಸಂಭವಿಸಿದೆ. ಇದರಿಂದಾಗಿ 18 ಜನರು ಸಾವನ್ನಪ್ಪಿದ್ದು, ಇಬ್ಬರು ಕಣ್ಮರೆಯಾಗಿದ್ದಾರೆ. ರಾಜ್ಯದಲ್ಲಿನ ನೈಸರ್ಗಿಕ ವಿಪತ್ತಿನ ನಿರ್ವಹಣೆ ಬಗ್ಗೆ ಸಿಎಂ ಪುಷ್ಕರ್‌ಸಿಂಗ್ ಧಾಮಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದಾರೆ.

# ಮದ್ದುಗುಂಡು ಖರೀದಿ ಮಿತಿ ಕಡಿತಕ್ಕೆ ಶಿಫಾರಸು


ಬಿಹಾರ : ರಾಜ್ಯದಲ್ಲಿ ಪ್ರತಿ ವರ್ಷ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ಪೊಲೀಸರು ವಶಪಡಿಸಿಕೊಳ್ಳುತ್ತಾರೆ. ಕ್ಯಾಟ್ರಿಡ್ಜ್‌ಗಳನ್ನು ಅಕ್ರಮವಾಗಿ ಬೇರೆಡೆಗೆ ಸಾಗಿಸಲಾಗುತ್ತಿರುವುದು ಕಂಡುಬಂದ ಹಿನ್ನೆಲೆ ಎಚ್ಚೆತ್ತ ರಾಜ್ಯ ಪೊಲೀಸರು, ಬಂದೂಕು ಪರವಾನಗಿ ಹೊಂದಿರುವವರು ಮದ್ದುಗುಂಡು



ಖರೀದಿಗೆ ಮಿತಿಯನ್ನು ವಾರ್ಷಿಕ 200 ಸುತ್ತುಗಳಿಂದ 50 ಸುತ್ತುಗಳಿಗೆ ಕಡಿತಗೊಳಿಸುವಂತೆ ಶಿಫಾರಸು ಮಾಡಿದ್ದಾರೆ. ಬಿಹಾರದಲ್ಲಿ ಪ್ರತಿ ವರ್ಷ ಸರಾಸರಿ 3,600 ಬಂದೂಕುಗಳು ಮತ್ತು 17,000 ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗುತ್ತದೆ. ಹಿಂಸಾತ್ಮಕ ಅಪರಾಧಗಳು ನಡೆಯುವ 5 ರಾಜ್ಯಗಳಲ್ಲಿ ಬಿಹಾರ ಒಂದಾಗಿದೆ.

# ದಾಳಿ ಖಂಡಿಸದ ಪ್ರಧಾನಿ ಮೋದಿ ವಿರುದ್ಧ ಕಾಂಗ್ರೆಸ್ ಕಿಡಿ

ನವದೆಹಲಿ: ಇರಾನ್ ಮೇಲೆ ಇಸ್ರೇಲ್ ಮತ್ತು ಅಮೆರಿಕದ ದಾಳಿಯನ್ನು ಭಾರತ ಸರ್ಕಾರ ಖಂಡಿಸದೇ ಇರುವುದನ್ನು ಕಾಂಗ್ರೆಸ್ ಪ್ರಶ್ನಿಸಿದೆ. ಅಲ್ಲದೇ, ಪ್ರಾಂತೀಯ ಶಾಂತಿಗಾಗಿ ಇರಾನ್ ರಾಜತಾಂತ್ರಿಕ ಮಾತುಕತೆಗೆ ಮುಂದಾಗಬೇಕು ಎಂದು ಸಲಹೆ ನೀಡಿದ್ದು ಅಪಹಾಸ್ಯ ಎಂದು ಟೀಕಿಸಿದೆ. ಇರಾನ್ ಮೇಲೆ ಅಮೆರಿಕ ದಾಳಿ ಮಾಡಿ, ಶಾಂತಿ ಸಂಧಾನಕ್ಕೆ ಬರಬೇಕು ಎಂದು ಕರೆ ನೀಡಿರುವುದನ್ನು ಕಾಂಗ್ರೆಸ್ ಟೀಕಿಸಿದೆ. ಆದಾಗ್ಯೂ ಇರಾನ್ ಜೊತೆಗೆ ರಾಜ ತಾಂತ್ರಿಕ ಮಾತುಕತೆಯಿಂದ ಸಂಘರ್ಷವನ್ನು ನಿಲ್ಲಿಸಬೇಕು ಎಂದು ಹೇಳಿದೆ. ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಅವರು ಪ್ರಧಾನಿ ಮೋದಿ ಅವರ ನಿಲುವನ್ನು ಪ್ರಶ್ನಿಸಿದ್ದರು.



# ಪೊಲೀಸರಿಂದ ಪಾಕಿಸ್ತಾನಿ ಬೇಹುಗಾರರ ಬಂಧನ

ಪಂಜಾಬ್ : ಪಂಜಾಬ್ ಪೊಲೀಸರು ಮಿಂಚಿನ ಕಾರ್ಯಾಚರಣೆ ನಡೆಸಿದ್ದಾರೆ. ಪಾಕಿಸ್ತಾನದ ಐಎಸ್‌ಐ ಪರ ಕೆಲಸ ಮಾಡುತ್ತಿದ್ದ ಇಬ್ಬರು ಬೇಹುಗಾರರನ್ನು ಹೆಡೆಮುರಿ ಕಟ್ಟಿದ್ದಾರೆ. ಈ



ಬಂಧಿತರಿಗೆ ಪಾಕ್‌ನ ಐಎಸ್‌ಐ ಏಜೆಂಟರ ಜೊತೆ ನೇರಸಂಪರ್ಕ ಇದ್ದು, ವಾಟ್ಸಪ್ ಮೂಲಕ ಗುಪ್ತಚರ ಮಾಹಿತಿಯನ್ನು ರವಾನಿಸುತ್ತಿದ್ದರು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಫ್ಯಾಮಿಲಿ ಥ್ರಿಲ್ಲರ್ ಚಿತ್ರದಲ್ಲಿ ಕೃಷ್ಣ ಅಜಯರಾವ್

ನನ್ ಮಗಳೇ ಹೀರೋಯಿನ್ ಸೇರಿದಂತೆ ಹಲವು ಸದಭಿರುಚಿಯ ಚಿತ್ರಗಳ ನಿರ್ದೇಶಕ ಎಸ್.ಕೆ. ಬಾಹುಬಲಿ ಇದೀಗ ಕೃಷ್ಣ ಅಜೇಯ್‌ರಾವ್ ಚಿತ್ರಕ್ಕೆ ಆಕ್ಷನ್‌ಕಟ್ ಹೇಳುತ್ತಿದ್ದಾರೆ. ಪಿ.ಕೆ. ಪ್ರೊಡಕ್ಷನ್ಸ್ ಮೂಲಕ ನಿರ್ಮಾಪಕ ಕಿರಣ್ ಅವರು ಮೊದಲ ಬಾರಿಗೆ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಇನ್ನೂ ಹೆಸರಿಡದ ಈ ಚಿತ್ರದ ಮುಹೂರ್ತ ಸಮಾರಂಭ ಶ್ರೀ ಬಂಡೆ ಮಹಾಕಾಳಮ್ಮ ದೇವಸ್ಥಾನದಲ್ಲಿ ನೆರವೇರಿತು. ಚಿತ್ರದ ಪ್ರಥಮ ದೃಶ್ಯಕ್ಕೆ ಯೋಗರಾಜ ಭಟ್ಟರು ಕ್ಲಾಪ್ ಮಾಡಿದರೆ, ದಿನಕರ್ ತೂಗುದೀಪ ಕ್ಯಾಮರಾ ಚಾಲನೆ ಮಾಡಿದರು. ನಿರ್ದೇಶಕ ಎಂ.ಡಿ. ಶ್ರೀಧರ್, ಎಸ್. ನಾರಾಯಣ್, ಶಿವತೇಜಸ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಲವರ್ ಬಾಯ್, ಆಕ್ಷನ್ ಹೀರೋ, ಭಗ್ನ ಪ್ರೇಮಿಯಾಗಿ ಕಾಣಿಸಿಕೊಂಡಿದ್ದ ಅಜಯ್ ರಾವ್ ಈ ಚಿತ್ರದ ಮೂಲಕ ರಗಡ್ ಹೀರೋ ಆಗುತ್ತಿದ್ದಾರೆ. ಮುಹೂರ್ತದ ನಂತರ ನಿರ್ದೇಶಕ ಬಾಹುಬಲಿ ಮಾತನಾಡುತ್ತ ಇದೊಂದು ಫ್ಯಾಮಿಲಿ ಥ್ರಿಲ್ಲರ್ ಚಿತ್ರ. ನ್ಯಾಷನಲ್ ಲೆವೆಲ್‌ನಲ್ಲಿ ನಡೆಯುವ ಕಥೆ. ಒಂದು ಘಟನೆಯನ್ನು ಇನ್ ಸ್ಕ್ರೀನ್ ಆಗಿ ತೆಗೆದುಕೊಂಡು ಸ್ಕ್ರಿಪ್ಟ್ ಮಾಡಿದ್ದೇವೆ. ನಾನೀ ಕಥೆ ಮಾಡಿಕೊಂಡಾಗಲೇ ಈ ಕ್ಯಾರೆಕ್ಟರನ್ನು ಅಜಯ್ ರಾವ್ ಕೈಲೇ ಮಾಡಿಸಬೇಕೆಂದುಕೊಂಡೆ. ಅವರು ಫ್ಯಾಮಿಲಿ ಹೀರೋ, ಕಥೆ ಕೇಳಿದ ತಕ್ಷಣ ಅವರೂ ಸಹ ಒಪ್ಪಿದರು. ಅವರ ಪಾತ್ರಕ್ಕೆ 4-5 ಶೇಡ್ಸ್ ಇದೆ. ಅದರಲ್ಲಿ ಈ ಬೋಳು ತಲೆಯ ಗೆಟಪ್ ಕೂಡ ಒಂದು. ಇದಕ್ಕೆ ಬಾಂಬೆಯಿಂದ ವಿಗ್ ಮೇಕರ್ ಕರೆಸಿದ್ದೆವು. ಅವರು ನಾಲ್ಕೈದು ಗಂಟೆ ತೆಗೆದುಕೊಂಡು ಅಜಯ್‌ರಾವ್ ಅವರಿಗೆ ಈ ವಿಗ್ ಕೂರಿಸಿದರು. ಬೆಂಗಳೂರು, ಮೈಸೂರು, ಪಾಂಡಿಚೇರಿ ಸುತ್ತಮುತ್ತ 60ರಿಂದ 70 ದಿನ ಶೂಟಿಂಗ್ ನಡೆಸುವ ಪ್ಲಾನಿದೆ. ಉಪಾಧ್ಯಕ್ಷ ಖ್ಯಾತಿಯ ಮಲ್ಲಿಕಾ ಟಿ. ವಸು ಪಾಲ್ ಅವರು ಚಿತ್ರದ ನಾಯಕಿ ಪಾತ್ರ ಮಾಡುತ್ತಿದ್ದಾರೆ ಎಂದರು. ನಾಯಕ ಅಜೇಯ್‌ರಾವ್ ಮಾತನಾಡಿ ಯುದ್ಧಕಾಂಡ ಟೈಮಲ್ಲಿ ಬಾಹುಬಲಿ ಬಂದು ಈ ಕಥೆ ಹೇಳಿದರು ಎಂದರು.



## ಯಶ್ ಶೆಟ್ಟಿ ನಟಿಸಿರುವ 'ಜಂಗಲ್ ಮಂಗಲ್' ಜುಲೈ 4ರಂದು ತೆರೆಗೆ

ನಾನು ಮೊದಲು ಇಬ್ಬರು ಖ್ಯಾತ ನಿರ್ದೇಶಕರಿಗೆ ಧನ್ಯವಾದ ಹೇಳಬೇಕು ಎಂದು ಮಾತನಾಡಿದ "ಜಂಗಲ್ ಮಂಗಲ್" ಚಿತ್ರದ ನಿರ್ದೇಶಕ ರಕ್ಷಿತ್ ಕುಮಾರ್, ನಮ್ಮ ಚಿತ್ರದ ಟ್ರೇಲರ್ ನೋಡಿದ ಯೋಗರಾಜ್ ಭಟ್ ಅವರು ಈ ಚಿತ್ರಕ್ಕೆ "ಜಂಗಲ್ ಮಂಗಲ್" ಎಂದು ಹೆಸರಿಡಿ ಎಂದರು. ಚಿತ್ರ ಮೆಚ್ಚಿಕೊಂಡ ಮತ್ತೊಬ್ಬ ನಿರ್ದೇಶಕ ಸಿಂಪಲ್ ಸುನಿ ತಮ್ಮ ಸುನಿ ಸಿನಿಮಾಸ್ ಬ್ಯಾನರ್ ಮೂಲಕ ಚಿತ್ರವನ್ನು ಅರ್ಪಿಸಲು ಹೇಳಿದರು. ಇದೊಂದು ಅರೆ ಮಲೆನಾಡಿನಲ್ಲಿ ನಡೆಯುವ ಕಥೆ. ನಾವೊಂದಿಷ್ಟು ಜನ ಸ್ನೇಹಿತರ ಸೇರಿ ನಿರ್ಮಾಣ ಮಾಡಿರುವ ಚಿತ್ರ, ಹತ್ತುವರ್ಷಗಳಿಂದ ಕನ್ನಡ ಹಾಗೂ ತುಳು ಚಿತ್ರರಂಗದ ವಿವಿಧ ಆಯಾಮಗಳಲ್ಲಿ ಕೆಲಸ ಮಾಡಿರುವ ನನಗೆ ನಿರ್ದೇಶಕನಾಗಿ ಇದು ಮೊದಲ ಚಿತ್ರ. ಇದು ಅರೆ ಮಲೆನಾಡಿನಲ್ಲಿ ನಡೆಯುವ ಕಥೆಯಾಗಿದ್ದರೂ, ಯೂನಿವರ್ಸಲ್ ಸಬ್ಜೆಕ್ಟ್ ಎನ್ನಬಹುದು. ಎಲ್ಲಾ ಪ್ರಾಂತ್ಯದಲ್ಲೂ ನಡೆಯುವ ಕಥೆಯೂ ಹೌದು. ಸಹ್ಯಾದ್ರಿ ಸ್ಟುಡಿಯೋಸ್ ಮೂಲಕ ನಿರ್ಮಾಣವಾಗಿರುವ ಈ ಚಿತ್ರಕ್ಕೆ ಪ್ರಜೀತ್ ಹೆಗಡೆ, ಸಂಕಲನಕಾರ ಮನು ಶೇಡ್ಗಾರ್ ಬಂಡವಾಳ ಹಾಕಿದ್ದಾರೆ.



## ಯುವ 'ಎಕ್ಕ' ಪ್ರಚಾರಕ್ಕೆ ಕಿಕ್ ಸ್ಟಾರ್ಟ್... ಜುಲೈ 18ಕ್ಕೆ ಚಿತ್ರ ರಿಲೀಸ್

ಯುವ ರಾಜ್ಕುಮಾರ್ ಕನ್ನಡ ಚಿತ್ರರಂಗದ ಭರವಸೆಯ ನಟನಾಗಿ ಗುರುತಿಸಿಕೊಂಡಿದ್ದು, ಸದ್ಯ ತಮ್ಮ ಎರಡನೇ ಸಿನಿಮಾ ಬಿಡುಗಡೆಯಲ್ಲಿ ಬ್ಯುಸಿಯಾಗಿದ್ದಾರೆ. ಯುವ ನಟನೆಯ 'ಎಕ್ಕ' ಸಿನಿಮಾ ಚಿತ್ರೀಕರಣ ಮುಗಿಸಿದ್ದು ಬಿಡುಗಡೆಗೆ ರೆಡಿಯಾಗಿದೆ. ಸಿನಿಮಾದ ಪ್ರಚಾರ ಕಾರ್ಯ ಪ್ರಾರಂಭ ಆಗಿದೆ. ಟೀಸರ್, ಹಾಡುಗಳು ಬಿಡುಗಡೆಯಾಗಿದ್ದು, ಭರ್ಜರಿ ರೆಸ್ಪಾನ್ಸ್ ಸಿಕ್ಕಿದೆ. ಇಂದು ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ 'ಎಕ್ಕ' ಸಿನಿಮಾದ ಸುದ್ದಿಗೋಷ್ಠಿ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಯುವರಾಜ್ ಕುಮಾರ್ ಹಾಗೂ ಇಡೀ ತಂಡ ಹಾಜರಿದ್ದರು. ಈ ವೇಳೆ ನಿರ್ದೇಶಕ ರೋಹಿತ್ ಪದಕಿ ಮಾತನಾಡಿ, ಒಂದು ಸಿನಿಮಾ ಮಾಡಬೇಕಿದ್ದರೆ ಒಂದೊಳ್ಳೆ ವೈಬ್ ಇದ್ದರೆ ಅದು ಚೆನ್ನಾಗಿ ಹೋಗುತ್ತದೆ ಎಂಬ ನಂಬಿಕೆ ಇದೆ. ನಾವು ಬಿಟ್ಟಿರುವ ಪ್ರತಿ ಕಂಟೆಂಟ್ ಎಷ್ಟು ಎಂಜಾಯ್ ಮಾಡಿದ್ದೇವೆ ಎಂಬುದನ್ನು ನೀವು ನೋಡಿದ್ದೀರಾ. ನೋಡುವಾಗ ನಿಮಗೂ ಕೂಡ ಅದೇ ಎಮೋಷನ್ ಪಾಸ್ ಆಗುತ್ತದೆ ಎಂದುಕೊಂಡಿದ್ದೇನೆ. ಒಂಬತ್ತು ತಿಂಗಳಲ್ಲಿ ಮಗು ಹೆತ್ತಾಗೆ ಸಿನಿಮಾ ಮಾಡಬಹುದು ಎಂದರು. ನಾಯಕ ಯುವ ಮಾತನಾಡಿ, ಎಕ್ಕ ಸಿನಿಮಾದಿಂದ ನಾವು ಬಿಟ್ಟಿರುವ ಎಲ್ಲಾ ಕಂಟೆಂಟ್ ಎಲ್ಲರಿಗೂ ಮುಟ್ಟುತ್ತಿದೆ. ಬ್ಯಾಂಗಲ್ ಬಂಗಾರಿ ಹಾಡಿಗೆ ಎಲ್ಲಾ ವರ್ಗದ ಜನ ಇಷ್ಟಪಟ್ಟು ಡ್ಯಾನ್ಸ್ ಮಾಡಿರುವುದನ್ನು ನೋಡಲು ಖುಷಿಯಾಗುತ್ತದೆ ಎಂದರು.




## ಜುಲೈ 24ಕ್ಕೆ ಪವನ್ ಕಲ್ಯಾಣ್ 'ಹರಿ ಹರ ವೀರ ಮಲ್ಲು' ರಿಲೀಸ್

ತೆಲುಗು ಚಿತ್ರರಂಗದ ಪವರ್ ಸ್ಟಾರ್ ಪವನ್ ಕಲ್ಯಾಣ್ ಉಪಮುಖ್ಯಮಂತ್ರಿ ಗದ್ದುಗೇರಿದ ಮೇಲೆ ರಾಜಕೀಯದಲ್ಲಿ ಬ್ಯುಸಿಯಾಗಿದ್ದಾರೆ. ಈ ನಡುವೆ ಅವರು ಬಹಳ ದಿನಗಳಿಂದ ಬಳಿಕ ಸಿನಿ ಮಾಕಡೆ ಮುಖ ಮಾಡಿದ್ದಾರೆ. ಇದೀಗ ಪವನ್ ಕಲ್ಯಾಣ್ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಅವರು ನಟಿಸಿರುವ ಬಹುನಿರೀ ಕ್ಷಿತ ಸಿನಿಮಾ 'ಹರಿಹರ ವೀರ ಮಲ್ಲು' ಬಿಡುಗಡೆಗೆ ಸಜ್ಜಾಗಿದೆ. ಈ ಚಿತ್ರದ ರಿಲೀಸ್ ಡೇಟ್ ಘೋಷಣೆಯಾಗಿದೆ. ಹರಿಹರ ವೀರ ಮಲ್ಲು ಸಿನಿಮಾದ ಪೋಸ್ಟ್ ಪ್ರೊಡಕ್ಷನ್ ಕೆಲಸ ಭರದಿಂದ ಸಾಗುತ್ತಿದೆ. ಈಗಾಗಲೇ ಬಿಡುಗಡೆಯಾಗಿರುವ ಹಾಡುಗಳು ಸಿನಿಪ್ರಿಯರಿಗೆ ಇಷ್ಟವಾಗಿವೆ. ಬಿಗ್ ಬಜೆಟ್ ತಯಾರಾಗಿರುವ ಹರಿ ಹರ ವೀರ ಮಲ್ಲು ಸಿನಿಮಾ ಜುಲೈ 24ರಂದು ಪ್ಯಾನ್ ಇಂಡಿಯಾ ಲೆವೆಲ್‌ನಲ್ಲಿ ಬಿಡುಗಡೆಯಾಗಲಿದೆ. ಹರಿ ಹರ ವೀರ ಮಲ್ಲುವಾಗಿ ಪವನ್ ಕಲ್ಯಾಣ್ ಸಿನಿಮಾದಲ್ಲಿ ಅಬ್ಬರಿಸಿದ್ದಾರೆ. 17ನೇ ಶತಮಾನದಲ್ಲಿ ಮೊಘಲ್ ಸಾಮ್ರಾಜ್ಯದ ವಿರುದ್ಧ ಹೋರಾಡಿದ ನಾಯಕನಾಗಿ ಪವರ್ ಸ್ಟಾರ್ ಮಿಂಚಿದ್ದಾರೆ. 300 ವರ್ಷಗಳ ಹಿಂದಿನ ಕಾಲಘಟ್ಟ ಕಟ್ಟಿಕೊಡಲು ಚಿತ್ರತಂಡ ಬಹಳ ಶ್ರಮಿಸಿದೆ. ವೀರಮಲ್ಲು ಆಗಿ ಪವನ್ ಕಲ್ಯಾಣ್ ಲುಕ್, ಗೆಟಪ್ ಭರವಸೆ ಮೂಡಿಸಿದೆ. ಜ್ಯೋತಿ ಕೃಷ್ಣ ಮತ್ತು ಕ್ರಿಶ್ ಜಗರ್ಲಮುಡಿ ನಿರ್ದೇಶನದಲ್ಲಿ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಚಿತ್ರ ಮೂಡಿಬಂದಿದೆ. ಚಿತ್ರದಲ್ಲಿ ನಿಧಿ ಅಗರ್‌ವಾಲ್ ನಾಯಕಿಯಾಗಿ ಮಿಂಚಿದ್ದಾರೆ. ಇನ್ನುಳಿದಂತೆ ಬಾಬಿ ಡಿಯೋಲ್, ನರ್ಗೀಸ್ ಫಕ್ರಿ, ಆದಿತ್ಯಾ ಮೆನನ್, ಶುಭಲೇಖ ಸುಧಾಕರ್ ತಾರಾಗಣದಲ್ಲಿದ್ದಾರೆ. ರೋಚಕ ಯುದ್ಧದ ಸನ್ನಿವೇಶಗಳು ಚಿತ್ರದಲ್ಲಿದೆ. ಮೆಗಾ ಸೂರ್ಯ ಪ್ರೊಡಕ್ಷನ್ಸ್ ಬ್ಯಾನರ್‌ನಲ್ಲಿ ಎ. ದಯಾಕರ್ ರಾವ್ ಈ ಚಿತ್ರವನ್ನು ನಿರ್ಮಿಸಿದ್ದು, ಎ.ಎಂ.ರತ್ನಂ ಪ್ರಸ್ತುತ ಪಡಿಸುತ್ತಿದ್ದಾರೆ. ಆಸ್ಕರ್ ಪ್ರಶಸ್ತಿ ವಿಜೇತ ಎಂ.ಎಂ. ಕೀರವಾಣಿ ಸಂಗೀತ ನಿರ್ದೇಶನ, ಮನೋಜ್ ಪರಮಹಂಸ ಛಾಯಾಗ್ರಹಣ ಚಿತ್ರಕ್ಕಿದೆ.



## ವಿಶೇಷ ಚೇತನ ಮಕ್ಕಳಿಗಾಗಿ 'ಸಿತಾರೆ ಜಮೀನ್ ಪರ್' ಚಿತ್ರದ ಪ್ರದರ್ಶನ

ಡೌನ್ ಸಿಂಡ್ರಾಮ್ ಮತ್ತು ಆರ್ಟಿಸಂ ವ್ಯಾಧಿಯಿಂದ ಬಳಲುತ್ತಿರುವ ಮಕ್ಕಳಿಗಾಗಿ ನಗರದ ಮಾಗಡಿ ರಸ್ತೆಯಲ್ಲಿರುವ ವೀರೇಶ್ ಚಿತ್ರಮಂದಿರದಲ್ಲಿ ಹಿಂದಿಯ 'ಸಿತಾರೆ ಜಮೀನ್ ಪರ್' ಚಿತ್ರದ ಉಚಿತ ಪ್ರದರ್ಶನವನ್ನು ಮಂಗಳವಾರ ಆಯೋಜಿಸಲಾಗಿತ್ತು. ನಟ ಅಮೀರ್‌ಖಾನ್ ಅಭಿನಯದ 'ಸಿತಾರೆ ಜಮೀನ್ ಪರ್' ಚಿತ್ರದ ಕಥಾಹಂದರ ಡೌನ್ ಸಿಂಡ್ರಾಮ್ ಮತ್ತು ಆರ್ಟಿಸಂ ವ್ಯಾಧಿಯಿಂದ ಬಳಲುತ್ತಿರುವ ಮಕ್ಕಳ ಕುರಿತಾಗಿದ್ದು, ಮಕ್ಕಳ ಮನಸ್ಸಿನಲ್ಲಿ ಭರವಸೆ ಮೂಡಿಸುವಂತಿದೆ. ಹೀಗಾಗಿ ಅ ಮಕ್ಕಳಿಗೆ ಉಚಿತವಾಗಿ ಈ ಚಿತ್ರವನ್ನು ಪ್ರದರ್ಶಿಸಲಾಯಿತು ಎಂದು ವಿರೇಶ್ ಚಿತ್ರಮಂದಿರದ ಮಾಲೀಕ ಕುಶಾಲ್ ಎಲ್.ಸಿ ಮತ್ತು ಆಯೋಜಕ ಬಿ.ಹೆಚ್. ಉಲ್ಲಾಸ್ ಗೌಡ ತಿಳಿಸಿದ್ದಾರೆ. ಚಿತ್ರದ ಪ್ರದರ್ಶನದ ವೇಳೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಮಾಜಿ ಅಧ್ಯಕ್ಷ ಭಾ.ಮ. ಹರೀಶ್ ಸೇರಿದಂತೆ ಚಿತ್ರರಂಗದ ಗಣ್ಯರು ಹಾಜರಿದ್ದರು.



## ಚಿಕ್ಕಣ್ಣ ಹುಟ್ಟುಹಬ್ಬಕ್ಕೆ ಲಕ್ಷ್ಮೀಪುತ್ರ ಪೋಸ್ಟರ್ ಅನಾವರಣ

ಕನ್ನಡ ಚಿತ್ರರಂಗದ ನ್ಯಾಚುರಲ್ ಸ್ಟಾರ್ ಚಿಕ್ಕಣ್ಣ ಹುಟ್ಟುಹಬ್ಬದ ಖುಷಿಯಲ್ಲಿದ್ದಾರೆ. ಅವರ ಜನ್ಮದಿನದ ವಿಶೇಷವಾಗಿ ಲಕ್ಷ್ಮೀಪುತ್ರ ಚಿತ್ರತಂಡ ಸ್ಪೆಷಲ್ ಪೋಸ್ಟರ್ ರಿಲೀಸ್ ಮಾಡಿದೆ. ಗ್ಲಾಸ್ ತೊಟ್ಟು ಸಂಪ್ರಾದಾಯಿಕ ಉಡುಪಿನಲ್ಲಿ ಚಿಕ್ಕಣ್ಣ ಕಂಗೊಳಿಸಿದ್ದಾರೆ. ಅಂದಹಾಗೇ ಲಕ್ಷ್ಮೀಪುತ್ರ ಚಿಕ್ಕಣ್ಣ ನಾಯಕನಾಗಿ ನಟಿಸುತ್ತಿರುವ ಎರಡನೇ ಸಿನಿಮಾ. ಲಕ್ಷ್ಮೀಪುತ್ರ ತಾಯಿ ಮಗನ ಬಾಂಧವ್ಯದ ಕಥೆ. ಚಿತ್ರಕ್ಕೆ ಅರ್ಜುನ್ ಕಥೆ ಹಾಗೂ ಸಾಹಿತ್ಯ ಬರೆದಿದ್ದು, ಅವರ ಜೊತೆ ಸಹಾಯಕ ನಿರ್ದೇಶಕರಾಗಿ ಕೆಲಸ ಮಾಡುತ್ತಿದ್ದ ವಿಜಯ್ ಎಸ್.ಸ್ವಾಮಿ ಅಕ್ಷನ್‌ಕಟ್ ಹೇಳುತ್ತಿದ್ದಾರೆ. ಚಿಕ್ಕಣ್ಣ ಮಗನಾಗಿ ತಾರಾ ತಾಯಿ ಅಭಿನಯಿಸುತ್ತಿದ್ದಾರೆ.ನಿರ್ದೇಶಕ ಎ.ಪಿ.ಅರ್ಜುನ್ ತಮ್ಮದೇ ಫಿಲ್ಮ್‌ನಡಿ ನಿರ್ಮಾಣ ಮಾಡುತ್ತಿರುವ ಈ ಚಿತ್ರದ ಶೂಟಿಂಗ್ ಭರದಿಂದ ಸಾಗಿದೆ. ಸಚಿವ ಸಂತೋಷ್ ಲಾಡ್ ಅರ್ಪಿಸುತ್ತಿದ್ದಾರೆ.




## ಈ ವಾರ ತೆರೆಗೆ "ತಿಮ್ಮನ ಮೊಟ್ಟೆಗಳು"

ರಕ್ಷಿತ್ ತೀರ್ಥಹಳ್ಳಿಯವರ ಬರವಣಿಗೆ ಮತ್ತು ನಿರ್ದೇಶನದಲ್ಲಿ ಮೂಡಿಬಂದಿರುವ "ತಿಮ್ಮನ ಮೊಟ್ಟೆಗಳು" ಚಿತ್ರ ಜೂನ್ 27ರಂದು ರಾಜ್ಯಾದ್ಯಂತ ತೆರೆಕಾಣುತ್ತಿದೆ. ಶ್ರೀಕೃಷ್ಣ ಪ್ರೊಡಕ್ಸನ್ಸ್ ಬ್ಯಾನರ್ ಅಡಿಯಲ್ಲಿ ಆದರ್ಶ್ ಅಯ್ಯಂಗಾರ್ ಚೊಚ್ಚಲ ನಿರ್ಮಾಣದ ಹಾಗೂ ರಕ್ಷಿತ್ ತೀರ್ಥಹಳ್ಳಿಯವರೇ ಬರೆದ "ಕಾಡಿನ ನೆಂಟರು" ಕಥಾ ಸಂಕಲನದಿಂದ ಆಯ್ದ ಒಂದು ಕಥೆ "ತಿಮ್ಮನ ಮೊಟ್ಟೆಗಳು" ಸಿನಿಮಾವಾಗಿದೆ. ಇತ್ತೀಚೆಗೆ ಅಮೇರಿಕಾದ ಡಾಲಸ್ ನಲ್ಲಿ ಈ ಚಿತ್ರದ ಪ್ರಿಮೀಯರ್ ಶೋ ನಡೆದಿದ್ದು, ಅಲ್ಲಿನ ಜನರು "ತಿಮ್ಮನ ಮೊಟ್ಟೆಗಳು" ಚಿತ್ರ ನೋಡಿ ಫಿದಾ ಆಗಿದ್ದಾರೆ. ಇಲ್ಲೂ ಕೂಡ ನಮ್ಮ ಚಿತ್ರ ಯಶಸ್ವಿಯಾಗಲಿದೆ ಎಂಬ ಭರವಸೆ ಚಿತ್ರತಂಡದು. ಈಗಾಗಲೇ ಹಲವು ಅಂತರರಾಷ್ಟ್ರೀಯ ಚಲನಚಿತ್ರೋತ್ಸವಗಳಲ್ಲೂ "ತಿಮ್ಮನ ಮೊಟ್ಟೆಗಳು" ಪ್ರದರ್ಶನಗೊಂಡು ಪ್ರಶಂಸೆ ಹಾಗೂ ಪ್ರಶಸ್ತಿ ಗಳಿಸಿದೆ.



## ಅನಿಲ್ ಶೆಟ್ಟಿ ನಾಯಕನಾಗಿ ಚಲನ ಚಿತ್ರರಂಗಕ್ಕೆ ಪಾದಾರ್ಪಣೆ

ವಾಣಿಜ್ಯೋದ್ಯಮದಲ್ಲಿ ಹಲವಾರು ಯಶಸ್ವಿ ಯೋಜನೆಗಳನ್ನು ರೂಪಿಸಿರುವಂತಹ ಅನಿಲ್ ಶೆಟ್ಟಿ ರವರು ಈಗ ಚಿತ್ರೋದ್ಯಮದಲ್ಲೂ ತಮ್ಮ ಛಾಪನ್ನು ಮೂಡಿಸಲು ಮುಂದಾಗಿದ್ದಾರೆ. ಸ್ಟಾರ್ಟಪ್ ಉದ್ಯಮಿ ಆಗಿರುವುದರ ಜೊತೆಗೆ ರಾಜಕಾರಣದಲ್ಲಿ ಸಹ ಸಕ್ರಿಯರಾಗಿರುವಂ ತಹ ಅನಿಲ್ ಬೆಂಗಳೂರು ನಗರದ ಯುವ ನಾಯಕರುಗಳ ಸಾಲಿನಲ್ಲಿ ಮುಂಚೂಣಿಯಲ್ಲಿದ್ದಾರೆ. ಇದೀಗ ತಮ್ಮ ಹುಟ್ಟುಹಬ್ಬದ ವಿಶೇಷ ಸಂದರ್ಭದಲ್ಲಿ ಅನಿಲ್ ಅವರು ಚಿತ್ರರಂಗಕ್ಕೆ ಸೇರುವ ತಮ್ಮ ಬಹಳ ದಿನಗಳ ಕನಸನ್ನು ನನಸು ಮಾಡಲು ಮುಂದಾಗಿದ್ದಾರೆ. ತಮ್ಮ ಮೊದಲ ಚಿತ್ರದಲ್ಲೇ ಅನಿಲ್ ನಟನಾಗಿ ಮಾತ್ರವಲ್ಲದೆ, ಬರಹಗಾರರಾಗಿಯೂ ಸಹ ಗುರುತಿಸಿಕೊಳ್ಳುತ್ತಿರುವುದು ವಿಶೇಷ. ಚಲನಚಿತ್ರಗಳಲ್ಲಿ ಬಹು ಕಾಲದಿಂದ ಆಸಕ್ತಿ ಹೊಂದಿದ್ದ ಇವರಿಗೆ, ಕನ್ನಡ ಚಿತ್ರರಂಗದ ಹೆಸರಾಂತ ವ್ಯಕ್ತಿಯೊಬ್ಬರು ನಟನೆಯತ್ತ ಗಮನಹರಿಸುವಂತೆ ಪ್ರೇರೇಪಿಸಿದ್ದರು.



## ಹಾರರ್ ಥ್ರಿಲ್ಲರ್ ಪೈನಾ

1800ಕ್ಕೂ ಹೆಚ್ಚು ಚಿತ್ರಗಳಿಗೆ ಸಾಹಸ ಸಂಯೋಜಕರಾಗಿ ಸೇವೆ ಸಲ್ಲಿಸಿರುವ ಕೌರವ ವೆಂಕಟೇಶ್ 'ನೋ ಕೋಕೇನ್' ಚಿತ್ರದ ಮೂಲಕ ನಿರ್ದೇಶಕರಾಗಿದ್ದು, ಈಗ ಪೈನಾ ಸಿನಿಮಾಕ್ಕೆ ಚಿತ್ರಕಥೆ, ಸಾಹಸ ಸಂಯೋಜಿಸಿ, ಎರಡನೇ ಬಾರಿ ನಿರ್ದೇಶನದ ಜವಬ್ದಾರಿಯನ್ನು ಹೊತ್ತುಕೊಂಡಿದ್ದಾರೆ. ಕಾನಿಷ್ಕ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಆರ್.ಕನಿಷ್ಕ ಮತ್ತು ಆರ್.ವೇದಿಶ್ ಬಂಡವಾಳ ಹೂಡುತ್ತಿದ್ದಾರೆ. ಕೌರವ ವೆಂಕಟೇಶ್ ಶಿಷ್ಯರಾಗಿದ್ದ ಡಿ.ಎಸ್.ಎಸ್.ಗೋವಿಂದರಾಜು ದೇವನಹಳ್ಳಿ ಹಾಗೂ ಲಾಫಿಂಗ್ ಪೀಕಾಕ್ ಪ್ರೊಡಕ್ಷನ್ ಸಹ ನಿರ್ಮಾಪಕರಾಗಿ ಗುರುತಿಸಿಕೊಂಡಿದ್ದಾರೆ. ಗುರುವಾರದಂದು ಸಾಣೆಗುರನಹಳ್ಳಿಯ ಶ್ರೀ ಗಣೇಶ ದೇವಸ್ಥಾನದಲ್ಲಿ ಮುಹೂರ್ತ ಸಮಾರಂಭ ನಡೆಯುತು.



## 'ಜಸ್ಟ್ ಮ್ಯಾರೀಡ್' ಚಿತ್ರದಲ್ಲಿ ಡೈನಾಮಿಕ್ ಸ್ಟಾರ್ ದೇವರಾಜ್

ಎ.ಬಿ.ಬಿ.ಎಸ್. ಸ್ಟುಡಿಯೋಸ್ ಲಾಂಛನದಲ್ಲಿ ಅಜನೀಶ್ ಲೋಕನಾಥ್ ಹಾಗೂ ಸಿ.ಆರ್ ಬಾಬಿ ಅವರು ನಿರ್ಮಿಸಿರುವ, ಸಿ.ಆರ್.ಬಾಬಿ ಅವರ ನಿರ್ದೇಶನದಲ್ಲಿ ಬಿಗ್‌ಬಾಸ್ ಖ್ಯಾತಿಯ ಶೈನ್ ಶೆಟ್ಟಿ ಹಾಗೂ ಅಂಕಿತ ಅಮರ್ ನಾಯಕ-ನಾಯಕಿಯಾಗಿ ನಟಿಸಿರುವ ಬಹು ನಿರೀಕ್ಷಿತ "ಜಸ್ಟ್ ಮ್ಯಾರೀಡ್" ಚಿತ್ರ ಆರಂಭದಿಂದಲೂ ಸಾಕಷ್ಟು ಕುತೂಹಲ ಮೂಡಿಸಿದೆ. ಕನ್ನಡ ಚಿತ್ರ ರಂಗದ ಸಾಕಷ್ಟು ಅನುಭವಿ ಹಾಗೂ ಹಿರಿಯ ಕಲಾವಿದರು ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ. ಆ ಪೈಕಿ ತಮ್ಮ ಅಮೋಘ ಅಭಿನಯದಿಂದ ಅಭಿಮಾನಿಗಳ ಮನ ಗೆದ್ದಿರುವ ಡೈನಾಮಿಕ್ ಸ್ಟಾರ್ ದೇವರಾಜ್ ಅವರು ಸಹ ಈ ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಅವರು ನಿವೃತ್ತ ನ್ಯಾಯಾಧೀಶರ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. "ಕರ್ತವ್ಯದಲ್ಲಿ ನ್ಯಾಯಾಧೀಶ, ಸ್ವಭಾವದಲ್ಲಿ ರಕ್ಷಕ ನ್ಯಾಯಾಲಯದಲ್ಲಾದರೂ ಮನೆಯಲ್ಲಾದರೂ ಕಾನೂನು ಸದಾ ಪಾಲನೆ ಆಗುತ್ತದೆ ಎಂದರು.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ



## ಹಂಸಲೇಖ ನಿರ್ದೇಶನ.. ರವಿಚಂದ್ರನ್ ಸಾಥ್..



ಕನ್ನಡ ಚಿತ್ರರಂಗದ ದಿಗ್ಗಜರೊಬ್ಬರಲ್ಲಿ ಒಬ್ಬರು ಹಂಸಲೇಖ. ಸಂಗೀತ ನಿರ್ದೇಶಕರಾಗಿ, ಚಿತ್ರ ಸಾಹಿತಿಯಾಗಿ ಗೆದ್ದಿರುವ ಹಂಸಲೇಖ ಈಗ ಡೈರೆಕ್ಟರ್ ಕುರ್ಚಿ ಅಲಂಕರಿಸಿದ್ದು, 'ಓಕೆ' ಎಂಬ ಚಿತ್ರ ನಿರ್ದೇಶನಕ್ಕೆ ಇಳಿದಿದ್ದಾರೆ. 'ಓಕೆ' ಚಿತ್ರದ ಲಾಂಚ್ ಹಾಗೂ ಸುದ್ದಿಗೋಷ್ಠಿ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಹಮ್ಮಿಕೊಳ್ಳಲಾಗಿತ್ತು. ಕ್ರೇಜಿಸ್ಟಾರ್ ರವಿಚಂದ್ರನ್ ವಿಶೇಷ ಅತಿಥಿಯಾಗಿ ಹಂಸಲೇಖ ಸಿನಿಮಾಗೆ ಸಾಥ್ ಕೊಟ್ಟರು. ಸಿಎಂ ಸಿದ್ದರಾಮಯ್ಯ ಅವರು ಹಂಸಲೇಖ ಅವರ ಸಾಹಸಕ್ಕೆ ಶುಭಾಶಯ ತಿಳಿಸಿದ್ದಾರೆ. ಹಂಸಲೇಖ ಅವರು 'ಓಕೆ' ಹೆಸರಿನ ಸಿನಿಮಾ ನಿರ್ದೇಶನ ಮಾಡುತ್ತಿದ್ದಾರೆ. ಈ ಸಿನಿಮಾಕ್ಕೆ ನಾಗೇಶ್ ವಾಳ್ಟರ್ ಮತ್ತು ಸೂರ್ಯ ಪ್ರಕಾಶ್ ಬಂಡವಾಳ ತೊಡಗಿಸಿದ್ದಾರೆ. ಆಕಾಂಕ್ಷ ಪ್ರೊಡಕ್ಷನ್ ಮತ್ತು ಐದನಿ ಎಂಟರ್ಟೈನ್‌ಮೆಂಟ್ ಸಂಸ್ಥೆಯ ವತಿಯಿಂದ ನಿರ್ಮಾಣ ಮಾಡಲಾಗುತ್ತಿದೆ. KT

## ಗಿರೀಶ್ ಪ್ರಯತ್ನದ ಫಸ್ಟ್ ಡೇ ಫಸ್ಟ್ ಶೋ..



ಕನ್ನಡ ಚಿತ್ರರಂಗ ಬದಲಾಗುತ್ತಿದೆ. ಜನ ಥಿಯೇಟರ್‌ಗೆ ಬರ್ತಿಲ್ಲ. ಮನೆಮಂದಿ ಕುಳಿತು ಒಟಿಟಿಯಲ್ಲಿಯೇ ಸಿನಿಮಾ ನೋಡುವ ಕಾಲಘಟ್ಟಕ್ಕೆ ತಲುಪಿದ್ದೇವೆ. ಹೀಗಾಗಿ ಚಿತ್ರ ಮಂದಿರದ ಸಂಪ್ರದಾಯ ಕೊಂಚವಾಗಿ ಮರೆಯುತ್ತಿದೆ ಎಂದರೆ ತಪ್ಪಾಗಲಿಕ್ಕಿಲ್ಲ. ಅದರಲ್ಲಿಯೂ ಫಸ್ಟ್ ಡೇ ಫಸ್ಟ್ ಶೋ ಎಂಬ ಸಂಸ್ಕೃತಿ ಇತ್ತೀಚೆಗೆ ಕಡಿಮೆಯಾಗುತ್ತಿದೆ. ಈ ಬೆಳವಣಿಗೆ ನಡುವೆ ಕನ್ನಡ ಚಿತ್ರರಂಗದ ಸುತ್ತ ಸಾಗುವ ಫಸ್ಟ್ ಡೇ ಫಸ್ಟ್ ಶೋ ಎಂಬ ಚಿತ್ರವೀಗ ಬೆಳ್ಳಿಪರದೆಗೆ ಎಂಟ್ರಿ ಕೊಡಲು ಸಜ್ಜಾಗಿದೆ. ಕನ್ನಡ ಚಿತ್ರರಂಗದ ಭರವಸೆ ನಿರ್ದೇಶಕ ಗಿರೀಶ್ ಹೊಸ ಪ್ರಯತ್ನವೇ ಫಸ್ಟ್ ಡೇ ಫಸ್ಟ್ ಶೋ. ಈ ಸಿನಿಮಾದ ಟ್ರೇಲರ್ ಬಿಡುಗಡೆ ಕಾರ್ಯಕ್ರಮಕ್ಕೆ ಡಾ. ರಾಜ್ ಕುಮಾರ್, ವಿಷ್ಣುವರ್ಧನ್, ಶಂಕರ್ ನಾಗ್ ಹಾಗೂ ಅಂಬರೀಶ್ ಅಭಿಮಾನಿಗಳು ಸಾಥ್ ಕೊಟ್ಟರು. KT

## ಸತ್ಯಪ್ರಕಾಶ್ ನಿರ್ದೇಶನದ "ಎಕ್ಸ್&ವೈ" ತೆರೆಗೆ..

"ರಾಮಾ ರಾಮಾ ರೇ" ಖ್ಯಾತಿಯ ಡಿ. ಸತ್ಯಪ್ರಕಾಶ್ ನಿರ್ಮಿಸಿ, ನಿರ್ದೇಶಿಸುವುದರ ಜೊತೆಗೆ ಪ್ರಮುಖಪಾತ್ರದಲ್ಲೂ ನಟಿಸಿರುವ "ಎಕ್ಸ್&ವೈ" ಚಿತ್ರ ಜೂನ್ 26(ಗುರುವಾರ) ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಜನಮನ್ನಣೆ ಪಡೆದಿರುವ "ರಾಮಾ ರಾಮಾ ರೇ", "ಒಂದಲ್ಲಾ ಎರಡಲ್ಲಾ" ಮತ್ತು "ಮ್ಯಾನ್ ಆಫ್ ದಿ ಮ್ಯಾಚ್ " ಚಿತ್ರಗಳನ್ನು ನಿರ್ದೇಶಿಸಿರುವ ಡಿ ಸತ್ಯಪ್ರಕಾಶ್ ಅವರಿಗೆ "ಎಕ್ಸ್&ವೈ" ನಾಲ್ಕನೇ ನಿರ್ದೇಶನದ ಚಿತ್ರ. ನಿರ್ದೇಶಕರೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದಿರುವ ಈ ಚಿತ್ರಕ್ಕೆ ಲವಿತ್ ಛಾಯಾಗ್ರಹಣ, ಬಿ.ಎಸ್.ಕೆಂಪರಾಜು, ಕೌಶಿಕ್ ಹರ್ಷ ಸಂಗೀತ ನಿರ್ದೇಶನ ಹಾಗೂ ವರದರಾಜ್ ಕಾಮತ್ ಕಲಾ ನಿರ್ದೇಶನವಿದೆ. ಚಿತ್ರದ ತಾರಾಬಳಗದಲ್ಲಿ ಬೃಂದಾ ಆಚಾರ್ಯ, ಡಿ.ಸತ್ಯಪ್ರಕಾಶ್, ಅಯಾನ, ಅಥರ್ವ ಪ್ರಕಾಶ್, ದೊಡ್ಡಣ್ಣ, ಮುಂತಾದವರಿದ್ದಾರೆ. KT



## ಮಂಸೋರೆಯ ದೂರ ತೀರ ಯಾನದಲಿ..

ಮಂಸೋರೆ ನಿರ್ದೇಶಿಸಿರುವ ದೂರ ತೀರ ಯಾನ ಸಿನೆಮಾ ಇದೇ ಜುಲೈ 11 ರಂದು ರಾಜ್ಯದಾದ್ಯಂತ ತೆರೆಕಾಣುತ್ತಿದೆ. ಈಗಾಗಲೇ ಬಿಡುಗಡೆ ಆಗಿರುವ ಸಿನೆಮಾದ ಎರಡು ಹಾಡುಗಳು ಜನರ ಮನ್ನಣೆ ಗಳಿಸುತ್ತಿವೆ. ಸಿನೆಮಾ ಆರಂಭದಿಂದ ಇಲ್ಲಿಯವರೆಗೂ ನಾಯಕಿ ಮತ್ತು ನಾಯಕನ ಪಾತ್ರಗಳನ್ನು ಹೊರತುಪಡಿಸಿ ಉಳಿದ ತಾರಾಗಣದ ಪರಿಚಯ ಮಾಡಿಸದೇ ಬಂದಿದ್ದ ಸಿನೆಮಾ ತಂಡ ಈಗ ಉಳಿದ ಪಾತ್ರಗಳ ಪರಿಚಯ ಆರಂಭಿಸಿದ್ದಾರೆ. ಅದರಲ್ಲಿ ಮೊದಲ ಪಾತ್ರ ಗೌರಿ. ಈ ಪಾತ್ರದಲ್ಲಿ ನಟಿಸಿರುವವರು ಕನ್ನಡದ ಖ್ಯಾತ ನಟಿ ಶೃತಿ ಹರಿಹರನ್. ಈ ಸಿನೆಮಾದಲ್ಲಿ ಗೌರಿ ಪಾತ್ರ ಮಾಡಿದ್ದ ಶೃತಿ ಹರಿಹರನ್ ಮತ್ತೆ ಮಂಸೋರೆ ಅವರ ಹೊಸ ಸಿನೆಮಾದಲ್ಲಿ ವಿಶೇಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಅವರ ಪಾತ್ರ ಪರಿಚಯದ ವಿಡಿಯೋ ಒಂದನ್ನು ಚಿತ್ರತಂಡ ಬಿಡುಗಡೆಗೊಳಿಸಿದೆ. ಈಗ ಚಿತ್ರತಂಡ ಪ್ರಚಾರ ಕಾರ್ಯಗಳಲ್ಲಿ ನಿರತವಾಗಿದೆ, KT











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212